ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ಕನ್ನಡದಿನ ಪತ್ರಿಕೆ

ರಾಯಚೂರಿನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 144 | ದಿನಾಂಕ : 04-07-2026 ಶನಿವಾರ Date : 04-07-2026 Saturday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಬಿಎಲ್‌ಓಗಳು ಕಡ್ಡಾಯವಾಗಿ ಮನೆ ಮನೆಗೆ ತೆರಳಿ ಫಾರಂ ಕೊಡ್ಬೇಕು: ರಾಜ್ಯ ಮುಖ್ಯ ಚುನಾವಣಾಧಿಕಾರಿ ಖಡಕ್ ಸೂಚನೆ

**ಬೆಂಗಳೂರು,ಜು.3**-ಬಿಎಲ್‌ಒಗಳು ಕಡ್ಡಾಯವಾಗಿ ಮನೆ ಮನೆಗೆ ತೆರಳಿ ಫಾರಂ ಕೊಡಬೇಕು ಎಂದು ರಾಜ್ಯ ಮುಖ್ಯ ಚುನಾವ ಣಾಧಿಕಾರಿ ವಿ. ಅನ್ಬುಕುಮಾರ್ ಖಡಕ್ ಸೂಚನೆ ನೀಡಿದ್ದಾರೆ.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಮೂರನೇ ದಿನಕ್ಕೆ ಕಾಲಿಟ್ಟಿದೆ. ಬಿಎಲ್‌ಒಗಳು ಮನೆಗಳಿಗೆ ತೆರಳದೇ ರಸ್ತೆಗಳಲ್ಲಿ ಟೆಂಟ್ ಹಾಕಿಕೊಂಡು ಕುಳಿತಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದ್ದವು.

ಜುಲೈ 2 ರಂದು ಬಂದಿರುವ ದೂರುಗಳನ್ನು ಆಧರಿಸಿ ಇಂದು ರಾಜ್ಯದ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು, ಡೆಪ್ಯುಟಿ ಕಮಿಷನರ್‌ಗಳು ಹಾಗೂ ಜಿಬಿಎ ಮುಖ್ಯ ಆಯುಕ್ತರಿಗೆ ಅಧಿಕೃತ ಸುತ್ತೋಲೆ ರವಾನಿಸಿರುವ ಸಿಇಒ, ಭಾರತೀಯ ➘4

## ಕಾಂಗ್ರೆಸ್ ಪಕ್ಷದಲ್ಲಿ ರೇಟ್ ಫಿಕ್ಸ್, ಸಂಪುಟ ವಿಸ್ತರಣೆಗೆ ಡೇಟ್ ಫಿಕ್ಸ್ ಆಗುತ್ತಿಲ್ಲ: ಬಿ.ವೈ.ವಿಜಯೇಂದ್ರ

**ಬೆಂಗಳೂರು,ಜು.3**-ಕಾಂಗ್ರೆಸ್ ಪಕ್ಷದಲ್ಲಿ ರೇಟ್ ಫಿಕ್ಸ್ ಆಗಿದೆ. ಸಂಪುಟ ವಿಸ್ತರಣೆಗೆ ಡೇಟ್ ಫಿಕ್ಸ್ ಆಗುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದರು.

ಬಿಜೆಪಿ ಮಲ್ಲೇಶ್ವರಂ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಬೆಳೆ ಬೆಳೆಯದಿರಿ ಎಂದು ಮುಖ್ಯಮಂತ್ರಿ ನೀಡಿದ ಹೇಳಿಕೆ ರೈತರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಮಾಡಿದೆ. ನಿನ್ನೆ ಈ ನಾಡಿನ ದೊರೆ, ಮುಖ್ಯಮಂತ್ರಿ ಒಂದು ಹೇಳಿಕೆ ಕೊಟ್ಟಿದ್ದಾರೆ. ನೀರಿಲ್ಲ; ಬೆಳೆ ಬೆಳೆಯುವುದು ಬೇಡ. ಭೀಕರ ಬರಗಾಲದ ಮುನ್ಸೂಚನೆ ವಿಚಾರವನ್ನು ಸಂಪುಟದಲ್ಲಿ ಚರ್ಚಿಸಿ ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲದ ಕಾರಣ ರೈತರು ಬೆಳೆ ಬೆಳೆಯದಿರಿ ➘4

## ಕೊಡಗಿನಲ್ಲಿ ಮಾನವ ಆನೆ ಸಂಘರ್ಷ ನಿವಾರಣೆಗೆ ಕೇಂದ್ರದಿಂದ ಮಹತ್ವದ ಭರವಸೆ: ಸಂಸದ ಯದುವೀರ್ ಮನವಿಗೆ ಸ್ಪಂದನೆ

**ಮೈಸೂರು,ಜು.3**-ಕೊಡಗು ಜಿಲ್ಲೆಯಲ್ಲಿನ ಮಾನವಆನೆ ಸಂಘರ್ಷ ಸಮಸ್ಯೆ ಪರಿಹಾರಕ್ಕೆ ಸಂಬಂಧಿಸಿ ಮೈಸೂರುಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಮನವಿಗೆ ಕೇಂದ್ರ, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ಸಕಾರಾತ್ಮಕ ಪ್ರತಿಕ್ರಿಯೆ ದೊರೆತಿದೆ.

2026ರ ಜೂನ್ 11ರಂದು ಸಂಸದ ಯದುವೀರ್ ಒಡೆಯರ್ ಅವರು ಕೇಂದ್ರ, ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿಯಾಗಿ ಸಲ್ಲಿಸಿದ್ದ ಮನವಿಗೆ ಪ್ರತಿಕ್ರಿಯಿಸಿದ ಸಚಿವರು, ಕೊಡಗಿನ ಅರಣ್ಯ ಅಂಚಿನ ಪ್ರದೇಶಗಳಲ್ಲಿ ➘4

### ರಾಯಚೂರು ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಸಭೆ

# ರೈತರ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರ ಪೂರೈಕೆ ಮಾಡಿ-ಡಾ.ಶರಣಪ್ರಕಾಶ್



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜು.3**-ಜಿಲ್ಲೆಯಲ್ಲಿ ರಸಗೊಬ್ಬರ ಕೊರತೆಯಾಗದಂತೆ ದಾಸ್ತಾನು ಮಾಡಿಕೊಳ್ಳಬೇಕು. ರೈತರ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರವನ್ನು ಕಾಲಕಾಲಕ್ಕೆ ರೈತರಿಗೆ ವಿತರಣೆ ಮಾಡಬೇಕು.ರೈತರಿಗೆ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳ ಬೇಕು ಎಂದು ರಾಯಚೂರು ಪ್ರಕೃತಿ ವಿಕೋಪ ನಿರ್ವಹಣೆಯ ಮೇಲುಸ್ತುವಾರಿ ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋ ಪಾಯ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಧಿಕಾರಿ ಗಳ ಕಚೇರಿಯ ಸಭಾಂಗಣ ದಲ್ಲಿ ರಾಯಚೂರು ಜಿಲ್ಲೆಯಲ್ಲಿ ಕುಡಿ ಯುವ ನೀರಿನ ಸಮಸ್ಯೆಗಳು, ಮುಂ ಗಾರು ಹಂಗಾಮಿನ ಬಿತ್ತನೆ ಮತ್ತು ರಸಗೊಬ್ಬರ ಬೇಡಿಕೆಗಳು ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಖಾಸಗಿ ಅಂಗಡಿಗಳಲ್ಲಿ ಇರುವ ದಾಸ್ತಾನುಗಳ ಬಗ್ಗೆ ಫಲಕ ಪ್ರದರ್ಶ ನ ಮಾಡಬೇಕು. ರೈತರಿಂದ ಹೆಚ್ಚುವರಿ ಹಣವನ್ನು ಸ್ವೀಕರಿಸದಂತೆ ನೋಡಿಕೊಳ್ಳಬೇಕು. ಕೃಷಿ ಇಲಾಖೆ ಯ ಅಧಿಕಾರಿಗಳು ಆಗಾಗ ರಸಗೊಬ್ಬರ ➘4

### ಜಿಲ್ಲಾ ಉಸ್ತುವಾರಿ ಸಚಿವರಿಂದ ಅಕ್ಕಕೆಫೆ ಉದ್ಘಾಟನೆ

# ಗ್ರಾಮೀಣ, ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಜು.3** -ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾ ನ ಜಿಲ್ಲಾ ಪಂಚಾಯತ ರಾಯಚೂರು ವತಿಯಿಂದ ನಗರದ ಜಿಲ್ಲಾ ಪಂಚಾಯತ ಆವರಣದಲ್ಲಿ ಅನುಷ್ಠಾನಗೊಂಡಿ ರುವ ಸ್ವಸಹಾಯ ಗುಂಪಿನ ಮಹಿಳೆಯರ ಅಕ್ಕ ಕೆಫೆಯನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಮಾನ್ಯ ಶ್ರೀ ಡಾ.ಶರಣಪ್ರಕಾಶ ಪಾಟೀಲ್ ರವರು ಉದ್ಘಾಟಿಸಿದರು.

ರಾಜ್ಯ ಸರ್ಕಾರ ಆರಂಭಿಸಿರುವ ಅಕ್ಕ ಕೆಫೆ ಯೋಜನೆಯ ಮುಖ್ಯ ಉದ್ದೇಶ ಗ್ರಾಮೀಣ ಮತ್ತು ಬಡ ಮಹಿಳೆಯರ ಆರ್ಥಿಕ ಸಬಲೀಕ ರಣ ಹಾಗೂ ಸ್ವಾವಲಂಬನೆಯಾ ಗಿದೆ. ಮಹಿಳಾ ಸ್ವಸಹಾಯ ಸಂಘ ಗಳ ಸದಸ್ಯರಿಗೆ ಸ್ವ- ಉದ್ಯೋಗಾವಕಾಶ ಕಲ್ಪಿಸಿ ಅವರ ಆತ್ಮವಿಶ್ವಾಸ ಹೆಚ್ಚಿಸುವುದು ಪ್ರಮುಖ ಗುರಿಯಾ ಗಿದೆ ಎಂದು ಸಚಿವರು ತಿಳಿಸಿದರು.

ಮಹಾಲಕ್ಷ್ಮೀ ಸ್ವಸಹಾಯ ಸಂಘ, ವಡ್ಲೂರು ಮಹಿಳೆಯರೊಂ ದಿಗೆ ಜಿಲ್ಲಾ ಉಸ್ತುವಾರಿ ಸಚಿವರು ಚರ್ಚಿಸುತ್ತ ಸದರಿ ಗುಂಪಿನಲ್ಲಿ ಅತಿ ಕಡುಬಡತನದ( ಅ್ವಿಎವಿ) ಮಹಿಳೆ ಯರು ಸೇರಿ ಅಕ್ಕ ಕೆಫೆಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿಕೊಂಡು ಹೋಗುತ್ತಿರುವ ಬಗ್ಗೆ ಮಾನ್ಯ ಸಚಿವರು ಮೆಚ್ಚುಗೆ ವ್ಯಕ್ತಪಡಿಸಿ ಇನ್ನೂ ಅತುತ್ಯಮವಾಗಿ ನಿರ್ವಹಿಸಿಕೊಂಡು ಹೋಗಬೇಕು, ಕಡಿಮೆ ದರದಲ್ಲಿ ಶುಚಿರುಚಿಯಾದ ಆಹಾರ ಪದಾರ್ಥಗಳನ್ನು ತಯಾರಿಸಿ ನೀಡುವದರೊಂದಿಗೆ ಗ್ರಾಹಕರನ್ನು ಅಕ್ಕಕೆಫೆಯಡಿ ಸೆಳೆಯುವಂತೆ ಮಾಡಬೇಕೆಂದು ಸಲಹೆ ನೀಡಿದರು. ➘4

# ಬೋಸರಾಜರಿಗೆ ಸಚಿವ ಸ್ಥಾನ ನೀಡಲು ಲಾರಿ ಓನರ್ಸ್ ವೇಲ್ಫೇರ್ ಅಸೋಸಿಯಷನ್ ಒತ್ತಾಯ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜು.4**-ಮಾಜಿ ಸಚಿವ ಎನ್.ಎಸ್ .ಬೋಸರಾಜರಿಗೆ ಸಚಿವ ಸ್ಥಾನ ನೀಡಬೇಕೆಂದು ಲಾರಿ ಓನರ್ ವೇಲ್ಫೇರ್ ಅಸೋಸಿಯೇಷನ್ ಒತ್ತಾಯಿಸಿದೆ. ಸಂಘದ ನಿರ್ದೇಶಕ ಸೈಯದ್ ಯೂನಸ್ ಸಲೀಂ ಮಾತನಾಡಿ ಕಳೆದ 20 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ದೇವರಾಜ ಅರಸು ಟ್ರಕ್ ಟರ್ಮಿನಲ್‌ಗೆ 10 ಎಕರೆ ಭೂಮಿ ಮಂಜೂರು ಮಾಡಿಸಿ 2 ಕೋಟಿ 20 ಲಕ್ಷ ರೂ ಅನುದಾನ ನೀಡಲು ಎನ್.ಎಸ್.ಬೋಸರಾಜ ಇವರು ಕಾರಣವಾಗಿದ್ದಾರೆ.

ಕಾಟನ್ ಮಿಲರ್ಸ್ ಅಸೋಸಿಯೇಷನ್ ಅಧ್ಯಕ್ಷ ವಿ.ಲಕ್ಷ್ಮೀರೆಡ್ಡಿ ಇವರು ಟ್ರಕ್ ಟರ್ಮಿನಲ್ ಸ್ಥಳ ಮಂಜೂರು ಮಾಡಿಸಲು ಕಾರಣರಾಗಿದ್ದಾರೆ. ಸ್ಥಳೀಯ ಲಾರಿಗಳಿಗೆ ನಿಲುಗಡೆಗೆ ಅನುಕೂಲವಾಗಲಿದ್ದು ಕಾಮಗಾರಿ ಕೊನೆ ಹಂತದಲ್ಲಿದೆ.

ಜಿಲ್ಲೆಯ ಅಭಿವೃದ್ಧಿ ಹಾಗೂ ಎಲ್ಲ ವರ್ಗದ ಜನರಿಗೆ ಅಭಿವೃದ್ದಿಗೆ ಸಹಕಾರ ನೀಡುವ ಎನ್.ಎಸ್.ಬೋಸರಾಜ ಇವರು ಸಚಿವರಾಗಿ ಉಸ್ತುವಾರಿ ಸಚಿವರಾದರೆ ಅನೇಕ ಸೌಲಭ್ಯ ಪಡೆಯಲು ಸಹಕಾರಿಯಾಗುತ್ತದೆ. ಕಾರಣ ಎನ್.

# ಎಸ್‌ಐಆರ್ ಕುರಿತು ಆತಂಕ ಬಿಟ್ಟು ಮಾಹಿತಿ ನೀಡಿ-ಬೋಸರಾಜ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜು.4**-ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ದೇಶದ ಭವಿಷ್ಯ ನಿರ್ಧರಿಸುವ ಪವಿತ್ರ ಕರ್ತವ್ಯವಾಗಿದೆ. ಜಿಲ್ಲೆಯ ಎಲ್ಲ ಅರ್ಹ ಮತದಾರರು ತಮ್ಮ ತಮ್ಮ ಹೆಸರನ್ನು ಈ ಪರಿಷ್ಕರಣೆಯ ಮತದಾರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬೇಕು ಇಲ್ಲದಿದ್ದರೆ ಪ್ರಜಾಪ್ರಭುತ್ವಕ್ಕೆ ಉಳಿಗಾಲವಿಲ್ಲ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್. ಎಸ್. ಬೋಸರಾಜು ಹೇಳಿದರು.

ವಿಶೇಷ ಮತದಾರರ ತೀವ್ರ ಪರಿಷ್ಕರಣೆ (ಎಸ್ ಐಆರ್) ಕಾರ್ಯಕ್ರಮದ ಅಂಗವಾಗಿ ನಗರದ ಅರಬ್ ಮೊಹಲ್ಲಾ, ಸಿಯಾತಲಾಬ್ ಸೇರಿದಂತೆ ವಿವಿಧ ಬಡಾವಣೆಗಳಿಗೆ ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಬೋಸರಾಜು ಮತ್ತು ಸಂಸದ ಕುಮಾರ ನಾಯಕರು ಭಾಗವಹಿಸಿ ಮತದಾನದ ಪರಿಷ್ಕರಣೆ ಬಗ್ಗೆ ವಿವರಿಸಿ ಜಾಗೃತಿ ಮೂಡಿಸಿ ಮಾತನಾಡಿದರು.

ನಿನ್ನೆ ನಾನು ಈ ಮತದಾರ ಪರಿಷ್ಕರಣೆಯಲ್ಲಿ ಭಾಗವಹಿಸಿ, ನನ್ನ ಎಲ್ಲಾ ವಿವರಗಳೊಂದಿಗೆ ಫಾರಂ ಭರ್ತಿ ಮಾಡಿ ಸ್ವವಿವರ ನೀಡಿದ್ದೇನೆ ಯಾರೂ ಸಹ ಈ ಪ್ರಕ್ರಿಯೆಯಿಂದ ದೂರ ಸರಿಯಬಾರದು.

# ದೇವದುರ್ಗ : ಛತ್ತು ಕುಸಿದು ಮೂವರು ಸಾವು ಪ್ರಕರಣ: ಸರ್ಕಾರದಿಂದ ಪರಿಹಾರ ಒದಗಿಸಲು ಪ್ರಯತ್ನ-ಕುಮಾರನಾಯಕ ಭರವಸೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜು.4**-ದೇವದುರ್ಗ ಪಟ್ಟಣದಲ್ಲಿ ಇತ್ತೀಚಿಗೆ ಮೇಲ್ಛಾವಣಿ ಕುಸಿದು 3 ವಿದ್ಯಾರ್ಥಿಗಳ ಮೃತಪಟ್ಟಿದ್ದು,ಅವರ ಕುಟುಂಬಕ್ಕೆ ಪರಿಹಾರ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಸಂಸದ ಜಿ.ಕುಮಾರ ನಾಯಕ ತಿಳಿಸಿದರು.

ಪಟ್ಟಣದಲ್ಲಿ ಘಟನಾ ಸ್ಥಳವನ್ನು ಶುಕ್ರವಾರ ವೀಕ್ಷಿಸಿ,ಸುದ್ದಿಗಾರರೊಂದಿಗೆ ಮಾತನಾಡಿದರು. ಘಟನೆ ಕುರಿತಂತೆ ಈಗಾಗಲೇ ಸ್ಥಳೀಯ ಠಾಣೆಯಲ್ಲಿ ಪ್ರಕರಣ ದಾಖಲಾಗಿ ದೆ.ಪುರಸಭೆ ಮತ್ತು ಲೋಕೋಪಯೋಗಿ ಇಲಾಖೆಗೆ ವಸ್ತುಸ್ಥಿತಿ ವರದಿ ನೀಡಲು ಈಗಾಗಲೇ ಸೂಚಿಸಿದ್ದು,ವರದಿ ಆಧರಿಸಿ



ತಹಸೀಲ್ದಾರರ ಮುಖಾಂತರ ಜಿಲ್ಲಾಧಿಕಾರಿಗೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ. ಕಟ್ಟಡ ಮಾಲೀಕರ ನಿರ್ಲಕ್ಷ ಕೂಡ ಸಾಬೀತಾಗಿದ್ದು ,ತನಿಖಾ ವರದಿ ಆಧರಿಸಿ ಕ್ರಮಕ್ಕೆಗೊಳ್ಳಲಾಗುವದು.

ಮೃತ ಪಟ್ಟವರು ವಿದ್ಯಾರ್ಥಿಗಳಾಗಿದ್ದು,ಅದರಲ್ಲೂ ಪ.ಜಾತಿವರಾಗಿರುವದರಿಂದ ಸಂಬಂಧ ಪಟ್ಟ ಇಲಾಖೆಗಳಿಂದ ಪರಿಹಾರ ಕೊಡಲು ಸಾಧ್ಯತೆ ಇದೆಯೇ ಎಂಬುದರ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವದು.

ಜಿಲ್ಲಾಧಿಕಾರಿಗಳು ಸರಕಾರಕ್ಕೆ ಸಲ್ಲಿಸುವ ವರದಿಯೊಂದಿಗೆ ನಾನೂ ಕೂಡ ಮುಖ್ಯಮಂತ್ರಿಯವರನ್ನು ಭೇಟಿಯಾಗಿ ಹೆಚ್ಚಿನ ಪರಿಹಾರ ಒದಗಿಸಲು ಪ್ರಯತ್ನಿಸುವೆ ಎಂದು ➘4

# ಶಕ್ತಿನಗರ ರಸ್ತೆಯಲ್ಲಿ ಅಂಬೇಡ್ಕರ ವಸತಿ ಶಾಲೆ ಸ್ಥಳಾಂತರಕ್ಕೆ ನಡುವಿಮನಿ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜು.4**-ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ ವಸತಿ ಶಾಲೆಯನ್ನು ಸ್ಥಳಾಂತರ ಮಾಡಿ ವಿದ್ಯಾರ್ಥಿಗಳಿಗೆ ಸೂಕ್ತ ಸೌಲಭ್ಯ ಒದಗಿಸಬೇಕೆಂದು ಅಖಂಡ ಕರ್ನಾಟಕ ರಕ್ಷಣಾ ಸೇವಾದಳದ ಜಿಲ್ಲಾಧ್ಯಕ್ಷ ಅ.ಮ.ನಡುವಿನಮನಿ ಒತ್ತಾಯಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಶಕ್ತಿನಗರದ ಮುಖ್ಯರಸ್ತೆಯಲ್ಲಿರುವ ತಾಜ್ ಹೋಟೆಲ್‌ನಲ್ಲಿ ವಸತಿ ಶಾಲೆಯಿದೆ. ವಿದ್ಯಾರ್ಥಿಗಳಿಗೆ ಸೂಕ್ತ ವ್ಯವಸ್ಥೆ ಇಲ್ಲದೇ ಇರುವದಿರಂದ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ನಡೆಸಿದ ಜನತಾದರ್ಶನದಲ್ಲಿ ದೂರು ನೀಡಲಾಗಿತ್ತು. ಮೂರು ತಿಂಗಳೊಳಗೆ ಸ್ಥಳಾಂತರ ಮಾಡುವದಾಗಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಭರವಸೆ ನೀಡಿದ್ದರು. ಆದರೂ ಇಂದಿಗೂ ಸ್ಥಳಾಂತರವಾಗದೇ ಇರುವದ ತಾಜ್ ಹೋಟೆಲ್ ಮಾಲೀಕರೊಂದಿಗೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಶಾಮೀಲಾಗಿರುಗವ ಸಂಶಯಗಳಿವೆ. ರಾಯಚೂರು ಹೈದ್ರಾಬಾದ ಮುಖ್ಯ ರಸ್ತೆಯಲ್ಲಿರುವ



ತಾಜ್ ಹೋಟೆಲ್ ನಲ್ಲಿ ವಸತಿ ಶಾಲೆ ಇರುವದಿರಂದ ವಾಹನಗಳ ಸಂಚಾರದಿಂದ ವಿದ್ಯಾರ್ಥಿಗಳ ಅಭ್ಯಾಸಕ್ಕೆ ತೊಂದರೆಯಾಗುತ್ತಿದೆ. ನೂರು ಮೀಟರ್ ಅಂತರದಲ್ಲಿಯೇ ಬಾರ್ ರೆಸ್ಟೋರೆಂಟಯಿದ್ದು ಉತ್ತಮ ಪರಿಸತ ಇಲ್ಲ. ಕೂಡಲೇ ಅಂಬೇಡ್ಕರ ವಸತಿ ಶಾಲೆಯ ಪ್ರಾಚಾರ್ಯರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ವಸತಿ ಶಾಲೆಯನ್ನು ಸ್ಥಳಾಂತರಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಬದಲ್ಲಿ ಹನುಮೇಶ ಗುಡಿ ಇದ್ದರು.

### ಬೀಡ್ರಗ್ಸ್ ಮುಕ್ತ ಸಮಾಜಕ್ಕಾಗಿ ಜಾಗೃತಿ

# ಪೊಲೀಸ್ ಠಾಣೆಗೆ ಸರಕಾರಿ ಕಾಲೇಜು ವಿದ್ಯಾರ್ಥಿನಿಯರ ಭೇಟಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಮಸ್ಕಿ,ಜು.4**-ಅಂತರರಾಷ್ಟ್ರೀಯ ಮಾದಕ ವಸ್ತು ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆ ಅಂಗವಾಗಿ ಪಟ್ಟಣದಲ್ಲಿ ವಿಶೇಷ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಇದರ ಭಾಗವಾಗಿ ಇಲ್ಲಿನ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿನಿಯರು ಪಟ್ಟಣದ ಪೊಲೀಸ್ ಠಾಣೆಗೆ ಶೈಕ್ಷಣಿಕ ಭೇಟಿ ನೀಡಿದರು.

ಈ ವೇಳೆ ಕಾನೂನು ಸುವ್ಯವಸ್ಥೆ ಮತ್ತು ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿನಿಯರು ಸವಿಸ್ತಾರವಾದ ಮಾಹಿತಿ ಪಡೆದುಕೊಂಡರು. ➘4



# ಭಾರತೀಯ ಕ್ರೈಸ್ತ ದಿನ: ರಕ್ತದಾನ ಶಿಬಿರ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜು.4**-ಯೇಸು ಕ್ರಿಸ್ತನ 12 ಮಂದಿ ಶಿಷ್ಯರಲ್ಲಿ ಒಬ್ಬರಾದ ಅಪೋಸ್ತಲ ತೋಮರು ಭಾರತಕ್ಕೆ ಆಗಮಿಸಿ ಸುವಾರ್ತೆ ಸಾರಿದ ಸ್ಮರಣಾರ್ಥ ಆಚರಿಸಲಾಗುವ ಭಾರತೀಯ ಕ್ರೈಸ್ತ ದಿನದ ಅಂಗವಾಗಿ ಬ್ಲೆಸ್ಡ್ ಫುಲ್ ಗಾಸ್ಪೆಲ್ ಚರ್ಚ್, ಡಯಾಸಿಸ್ ಆಫ್ ಆಲ್ ಪ್ರೊಟೆಸ್ಟೆಂಟ್ ಚರ್ಚ್ ಹಾಗೂ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್) ಸಂಯುಕ್ತಾಶ್ರಯದಲ್ಲಿ ಶುಕ್ರವಾರ ರಕ್ತದಾನ ಶಿಬಿರವನ್ನು ಆಯೋಜಿಸಲಾಯಿತು.

ನಗರದ ಜಹೀರಾಬಾದ್ ಚರ್ಚ್‌ನಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಯಮಿ ಚೆನ್ನಪ್ಪಗೌಡ ಅವರು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ರಕ್ತದಾನವು ಜೀವ ಉಳಿಸುವ ಮಹಾದಾನವಾಗಿದ್ದು, ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯಗಳಲ್ಲಿ ಪ್ರತಿಯೊಬ್ಬರೂ ಭಾಗಿಯಾಗಬೇಕು ಎಂದು ಹೇಳಿದರು.

ಶಿಬಿರದಲ್ಲಿ ಯುವಕರು ಹಾಗೂ ವಿಶ್ವಾಸಿಗಳು ➘4

## ಯಾದಗಿರಿಯಲ್ಲಿ ಡಾ.ಫ.ಗು.ಹಳಕಟ್ಟಿ ಜನ್ಮದಿನ ಮತ್ತು ವಚನ ಸಂರಕ್ಷಣಾ ದಿನಾಚರಣೆ

# ವಚನ ಸಾಹಿತ್ಯದ ಉಳಿವಿಗೆ ಫ.ಗು.ಹಳಕಟ್ಟಿ ಅವರ ಕೊಡುಗೆ ಅಪಾರ-ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ

ಕನ್ನಡ ಮಾತೃ ಭೂಮಿ ವಾರ್ತೆ



**ಯಾದಗಿರಿ,** ವಚನ ಸಾಹಿತ್ಯದ ಉಳಿವಿಗೆ ಫ.ಗು.ಹಳಕಟ್ಟಿ ಅವರ ಕೊಡುಗೆ ಅಪಾರವಿದೆ. ಅವರು ಈ ಸಮಾಜದ ವಚನಗುಮ್ಮಟ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಬಣ್ಣಿಸಿದರು.

ಅವರು ಜಿಲ್ಲಾಡಳಿತ, ಜಿಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಲಿಂಗೇರಿ ಕೊನಪ್ಪ ಶಿಕ್ಷಣ ಸಂಸ್ಥೆಯಲ್ಲಿ ಗುರುವಾರ ಆಯೋಸಿದ್ದ ವಚನ ಪಿತಾಮಹಾ ಡಾ. ಫ.ಗು.ಹಳಕಟ್ಟಿ ಅವರ ಜನ್ಮದಿನ ಮತ್ತು ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಅರ್ಪಿಸಿ ಕಾರ್ಯಕ್ರಮಕ್ಕೆ ಚಾಲನೆ ಅವರು ಮಾತನಾಡಿದರು.

ಮನೆ, ಮಠ, ಜಗುಲಿಗಳಲ್ಲಿ ಪೂಜಿಸುತ್ತಿದ್ದ ತಾಡೋಲೆಗಳನ್ನು ಹುಡುಕಿ ತಂದು, ಅದರಲ್ಲಿನ ಅರ್ಥ ಬಿಡಿಸಿ ಬರೆದ ಇವರು, ತಾವು ಸಂಗ್ರಹಿಸಿದ ರಾಶಿ,ರಾಶಿ ವಚನಗಳನ್ನು ಮುದ್ರಿಸಿ ಆ ಸಾಹಿತ್ಯ ಜನರಿಗೆ ತಲುಪಲು 1925ರಲ್ಲಿ ಹಿತಚಿಂತಕ ಮುದ್ರಣಾಲಯ ಆರಂಭಿಸಿದರು. ಮುದ್ರಣ ಯಂತ್ರ ಖರೀದಿಸಲು ಆರ್ಥಿಕ ತೊಂದರೆ ಉಂಟಾದಾಗ ವಕೀಲಿ ವೃತ್ತಿಯಿಂದ ಸಂಪಾದಿಸಿ ಕಟ್ಟಿದ್ದ ತಾವಿದ್ದ ಮನೆಯನ್ನೇ ಮಾರಿ ಬಾಡಿಗೆ ಮನೆಯಲ್ಲಿ ಅಂದು ಜೀವನ ಸಾಗಿಸಿದ ಮಹಾನ ವ್ಯಕ್ತಿ ಎಂದು ಬಣ್ಣಿಸಿದರು.

ಹಳಕಟ್ಟಿಯವರು ಸ್ವತಃ ಮೊಳೆಗಳನ್ನು ಜೋಡಿಸಿ. ಅಚ್ಚು ಹಾಕಿ ತಮ್ಮ ಕಾಲುಗಳಿಂದ ಪೆಡಲ್ ತುಳಿದು, ಮುದ್ರಿಸಿ ಪ್ರಕಟಿಸಿದ ಸಾಹಿತ್ಯದಿಂದ 250 ವಚನಕಾರರ ವಚನಗಳನ್ನು, ಸಾಹಿತ್ಯವನ್ನು ಹೊರತಂದರು. ಇವರ ಈ ಕಾರ್ಯ ಕೈಗೊಳ್ಳುವ ಮುಂಚೆ ಕೇವಲ 50 ವಚನಕಾರರ ವಚನಗಳು ಮಾತ್ರ ಬೆಳಕು ಕಂಡಿದ್ದವು. ಇದು ವಚನ ಸಾಹಿತ್ಯಕ್ಕೆ ಇವರು ನೀಡಿದ ಅಪಾರ ಕೊಡುಗೆ ಎಂದು ಶಾಸಕರು ಮಾರ್ಮಿಕವಾಗಿ ಹೇಳಿದರು.

1880 ಜುಲೈ 2 ರಂದು ಜನಿಸಿದ್ದ ಇವರು, ಬದುಕಿನುದ್ದಕ್ಕೂ ಸಂಘರ್ಷಗಳನ್ನೆ ಎದುರಿಸಿ,ಸಾಮಾಜಿಕ, ಶೈಕ್ಷಣಿಕ, ವಚನ ಸಾಹಿತ್ಯ, ಪತ್ರಿಕಾ ರಂಗಕ್ಕೆ ಅವಿರತ ಶ್ರಮ ಹಾಕಿದ ವಚನ ಪಿತಾಮಹಾ ಎಂದು ಹೇಳಿದ ಶಾಸಕರು,ಇವರ ಜೀವನಾದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಉಪನ್ಯಾಸಕ ಸತೀಶಕುಮಾರ್ ಹವಾಲ್ದಾರ ಮಾತನಾಡಿ, ನಾಡಿನ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರಾಗಿದ್ದ ಫ.ಗು.ಹಳಕಟ್ಟಿ ಅವರು ವಿಜಯಪುರ ನಗರಸಭೆ ಅಧ್ಯಕ್ಷರಾಗಿದ್ದಾಗ ಬೆಳೆಯುತ್ತಿರುವ ನಗರಕ್ಕೆ ಕುಡಿಯುವ ನೀರು ಒದಗಿಸಲು ಸರ್ ಎಂ.ವಿಶ್ವೇಶ್ವರಯ್ಯನವರನ್ನು ಅಲ್ಲಿಗೆ ಕರೆಯಿಸಿ, ಅವರ ತಾಂತ್ರಿಕ ಸಹಾಯ ಪಡೆದು ನಗರದ ಹೊರವಲಯದಲ್ಲಿ ಭೂತನಾಳ ಕೆರೆಯನ್ನು ಸ್ಥಾಪಿಸಿದ್ದು ಅವರ ದೂರದೃಷ್ಟಿಗೆ ಸಾಕ್ಷಿ. ಈ ಕೆರೆಯ ಕುಡಿಯುವ ನೀರಿನ ಯೋಜನೆ ನೂರು ವರ್ಷಗಳ ನಂತರ ಇಂದಿಗೂ ನಗರದ ಶೇ.30 ಭಾಗಕ್ಕೆ ಶುದ್ಧ ಕುಡಿಯುವ ನೀರು ಒದಗಿಸುತ್ತಿದೆ ಎಂದು ಹೇಳಿದರು.

ಮುಂಬೈ ವಿಧಾನಪರಿಷತ್ ಸದಸ್ಯರಾಗಿ ಬಿಜಾಪುರದಲ್ಲಿ ಬರಗಾಲ ನಿವಾರಣಾ ಸಂಸ್ಥೆ ಆರಂಭಿಸಿ. ಕೃಷಿ ಪರ್ಯಾಯ ಚಟುವಟಿಕೆ ಕೇಂದ್ರವಾಗಿಸಿದರು. ಹಳಕಟ್ಟಿಯವರು ಸ್ಥಾಪಿಸಿದ ಬಿ.ಎಲ್.ಡಿ.ಇ. ಸಂಸ್ಥೆ ಅಧ್ಯಕ್ಷರಾದ ಎಂ.ಬಿ. ಪಾಟೀಲರು ಹಳಕಟ್ಟಿ ಸ್ಮಾರಕ ಭವನ ನಿರ್ಮಿಸಿ ಅವರನ್ನು ಜೀವಂತಗೊಳಿಸಲು ವಚನಸಾಹಿತ್ಯ ಸಂಶೋಧನ ಕೇಂದ್ರ ಆರಂಭಿಸಿ, ಹಳಕಟ್ಟಿಯವರು ಜೀವಿತಾವಧಿಯಲ್ಲಿ ಪ್ರಕಟಿಸಿದ ಎಲ್ಲ ಸಾಹಿತ್ಯವನ್ನು 15 ಸಮಗ್ರ ಸಂಪುಟಗಳಲ್ಲಿ ಹತ್ತು ಸಾವಿರ ಪುಟಗಳಲ್ಲಿ ಹೊರತಂದಿದ್ದಾರೆ. ಹಳಕಟ್ಟಿಯವರ ಜನ್ಮದಿನವನ್ನು ಸರ್ಕಾರ ವಚನ ಸಾಹಿತ್ಯ ಸಂರಕ್ಷಣಾ ದಿನವಾಗಿ ಘೋಷಣೆ ಮಾಡಿದೆ ಎಂದು ಅವರು ವಿವರಿಸಿದರು.

ಈ ಕಾರ್ಯಕ್ರಮದಲ್ಲಿ ಯುಡಾ ಅಧ್ಯಕ್ಷರಾದ ಬಾಬುರಾವ ಕಾಡ್ಲೂರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಉಪನ್ಯಾಸಕರಾದ ಬಸವರಾಜ ಜುಗೇರಿ, ಕಾಲೇಜಿನ ಪ್ರಾಂಶುಪಾಲರಾದ ಗುರುಪ್ಪಚಾರ್ಯ ಎಂ. ವಿಶ್ವಕರ್ಮ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಆರಂಭದಲ್ಲಿ ಅಶೋಕ ರಾಜನಕೋಳ್ಳೂರ ಮತ್ತು ಸಂಗಡಗರಿಅದ ನಾಡಗೀತೆ ನಡೆಯಿತು.

# ಆರೋಗ್ಯವೇ ಮನುಷ್ಯನ ನಿಜವಾದ ಸಂಪತ್ತು: ಅಲ್ಲಮಪ್ರಭು ದೇಶಮುಖ



ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ,** ಉತ್ತಮ ಆರೋಗ್ಯವಿದ್ದಾಗ ಮಾತ್ರ ವ್ಯಕ್ತಿ, ಕುಟುಂಬ ಮತ್ತು ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಆರೋಗ್ಯವೇ ಮನುಷ್ಯನ ನಿಜವಾದ ಸಂಪತ್ತು ಎಂದು ಶರಣಬಸವೇಶ್ವರ ಸಂಸ್ಥಾನ ಆಡಳಿತಾಧಿಕಾರಿ ಡಾ. ಅಲ್ಲಮಪ್ರಭು ದೇಶಮುಖ ಅವರು ಹೇಳಿದರು.

ನಗರದ ಗೋದುತಾಯಿ ದೊಡ್ಡಪ್ಪ ಅಪ್ಪ ಪದವಿ ಮಹಿಳಾ ಮಹಾವಿದ್ಯಾಲಯದಲ್ಲಿ ಗುರುವಾರ ಲಿಂ. ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರ ಪ್ರಥಮ ಪುಣ್ಯಸ್ಮರಣೆ ಅಂಗವಾಗಿ ಶರಣಬಸವೇಶ್ವರ ದೇವಸ್ಥಾನ ಅವರಣದ ಶಾಲಾ-ಕಾಲೇಜುಗಳು ಮತ್ತು ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಬೋಧನ ಮತ್ತು ಸಾರ್ವಜನಿಕ ಆಸ್ಪತ್ರೆ, ಹಾಗೂ ಎಸ್.ನಿಜಲಿಂಗಪ್ಪ ದಂತ ವೈದ್ಯಕೀಯ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ 15 ದಿನಗಳವರೆಗೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ಉಚಿತ ಆರೋಗ್ಯಭಾಗ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ವೇಗದ ಜೀವನಶೈಲಿಯಲ್ಲಿ ಅನೇಕರು ತಮ್ಮ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸುತ್ತಾರೆ. ಆದರೆ ಸಣ್ಣ ಸಮಸ್ಯೆಗಳನ್ನು ಆರಂಭದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆ ಪಡೆದರೆ ದೊಡ್ಡ ಕಾಯಿಲೆಗಳನ್ನು ತಡೆಗಟ್ಟಬಹುದು. ಆದ್ದರಿಂದ ಇಂತಹ ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ಜನರಲ್ಲಿ ಆರೋಗ್ಯ ಜಾಗೃತಿ ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ. ಆರೋಗ್ಯವಂತ ಸಮಾಜವೇ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಆಧಾರ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಕುಟುಂಬದವರನ್ನೂ ನಿಯಮಿತ ಆರೋಗ್ಯ ತಪಾಸಣೆಗೆ ಪ್ರೇರೇಪಿಸಬೇಕು ಎಂದು ಅವರು ಹೇಳಿದರು.

ಅತಿಥಿಗಳಾದ ಹಿರಿಯ ವೈದ್ಯ ಡಾ. ಶರಣಗೌಡ ಪಾಟೀಲ್ ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಎಲ್ಲರೂ ತಮ್ಮ ಆರೋಗ್ಯದ ಸ್ಥಿತಿಯನ್ನು ತಿಳಿದುಕೊಂಡು ಸೂಕ್ತ ವೈದ್ಯಕೀಯ ಸಲಹೆ ಪಡೆಯಬೇಕು. ಸಮತೋಲನ ಆಹಾರ, ನಿಯಮಿತ ವ್ಯಾಯಾಮ, ಯೋಗ, ಸ್ವಚ್ಛತೆ ಹಾಗೂ ಮಾನಸಿಕ ಆರೋಗ್ಯದ ಕಡೆಗೂ ಸಮಾನ ಗಮನ ನೀಡಬೇಕು ಎಂದು ಹೇಳಿದರು. ಶರಣಬಸವೇಶ್ವರ ದೇವಸ್ಥಾನ ಆವರಣದ ಶಾಲಾ-ಕಾಲೇಜುಗಳ ನಿರ್ದೇಶಕಿ ಡಾ. ನೀಲಾಂಬಿಕಾ ಶೇರಿಕಾರ್ ಅವರು ಮಾತನಾಡಿದರು.

ವೇದಿಕೆ ಮೇಲೆ ಹಿರಿಯ ವೈದ್ಯರಾದ ಡಾ. ಮಲ್ಲಿಕಾರ್ಜುನ್ ತೆಗನೂರ್, ಡಾ. ಸುನೀಲ್ ದೇಶಮುಖ, ಡಾ. ವೀರೇಂದ್ರ ಪಾಟೀಲ್, ಡಾ. ನೀಲಾಂಬಿಕಾ ಶೇರಿಕಾರ್, ಪ್ರಾಚಾರ್ಯೆ ಡಾ. ಸೀಮಾ ಪಾಟೀಲ್, ಡಾ. ಎಂ.ಆರ್. ಹುಗ್ಗಿ, ಡಾ. ಅಮ್ರಪಾಲಿ ಉಪಸ್ಥಿತರಿದ್ದರು. ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂ.ಆರ್.ಎಂ.ಸಿ ಮಹಾವಿದ್ಯಾಲಯದ ವೈದ್ಯರು ಮತ್ತು ಶರಣಬಸವೇಶ್ವರ ದೇವಸ್ಥಾನ ಆವರಣದ ಶಾಲಾ-ಕಾಲೇಜುಗಳ ಎಲ್ಲ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

ಡಾ. ರಾಜಲಕ್ಷ್ಮೀ ಡಿ. ಅವರು ಸ್ವಾಗತಿಸಿದರು. ಡಾ. ಸಂತೋಷಕುಮಾರ್ ನಗಲಾಪೂರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು, ಪ್ರಸಾದ ಅಷ್ಟಗೀಕರ್ ಅವರು ಕಾರ್ಯಕ್ರಮ ನಿರೂಪಿಸಿದರು. ಡಾ. ಶ್ವೇತಾ ಗೋಪನೆ ಅವರು ವಂದಿಸಿದರು. ನಂತರ ಗೋದುತಾಯಿ ಪದವಿಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿನಿಯರಿಗೆ ಮತ್ತು ಸಿಬ್ಬಂದಿವರ್ಗದವರಿಗೆ ಆರೋಗ್ಯ ತಪಾಸಣೆ ಕೈಗೊಳ್ಳಲಾಯಿತು.

# 10 ಹೊಸ ಪೊಲೀಸ್ ಠಾಣೆಗಳ ಕಟ್ಟಡ ನಿರ್ಮಾಣಕ್ಕೆ ಅನುಮೋದನೆ: ಸಚಿವ ಪ್ರಿಯಾಂಕ್ ಖರ್ಗೆ

ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ,** ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಸಾರ್ವಜನಿಕರಿಗೆ ಪೊಲೀಸ್ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸುವ ಉದ್ದೇಶದಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 10 ಹೊಸ ಪೊಲೀಸ್ ಠಾಣೆಗಳ ಕಟ್ಟಡ ನಿರ್ಮಾಣಕ್ಕೆ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ಅನುಮೋದನೆ ನೀಡಲಾಗಿದೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದ್ದಾರೆ.

2026-27 ನೇ ಸಾಲಿನ ಬಜೆಟ್ನಲ್ಲಿ ಘೋಷಿಸಲಾಗಿದ್ದಂತೆ, ರಾಜ್ಯದ ವಿವಿಧ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಯೋಜನೆಯಡಿ ಒಟ್ಟು ?30 ಕೋಟಿ ಅನುದಾನವನ್ನು ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ಅವರು ಹೇಳಿಕೆಯಲ್ಲಿ ಮಾಹಿತಿ ನೀಡಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯ ಉಪ್ಪಿನಂಗಡಿ, ಧಾರವಾಡ ಜಿಲ್ಲೆಯ ಕುಂದಗೋಳ್, ಹಾಸನ್ ಜಿಲ್ಲೆಯ ಅರಸೀಕೆರೆ, ಯಾದಗಿರಿ ಜಿಲ್ಲೆಯ ಸುರಪುರ, ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ್, ಕೊಪ್ಪಳ್ ಜಿಲ್ಲೆಯ ಕುಷ್ಟಗಿ, ರಾಯಚೂರು ಜಿಲ್ಲೆಯ ಸಿರವಾರ್, ಹಾಸನ್ ಜಿಲ್ಲೆಯ ಸಕಲೇಶಪುರ, ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ, ಮೈಸೂರು ಜಿಲ್ಲೆಯ ಹುಣಸೂರು ಗ್ರಾಮಾಂತರ ಪೊಲಿಸ್ ಠಾಣೆಗಳಿಗೆ ಆಧುನಿಕ ಕಟ್ಟಡಗಳು ನಿರ್ಮಾಣವಾಗಲಿವೆ ಎಂದು ಅವರು ವಿವರಿಸಿದ್ದಾರೆ.

ಈ ಹೊಸ ಕಟ್ಟಡಗಳು ನಿರ್ಮಾಣವಾದ ನಂತರ ಪೊಲೀಸ್ ಸಿಬ್ಬಂದಿಗೆ ಉತ್ತಮ ಕಾರ್ಯಪರಿಸರ ದೊರೆಯಲಿದ್ದು, ಸಾರ್ವಜನಿಕರಿಗೆ ವೇಗವಾದ ಹಾಗೂ ಸುಲಭ ಪೊಲೀಸ್ ಸೇವೆ ಒದಗಿಸಲು ಸಾಧ್ಯವಾಗುತ್ತದೆ. ರಾಜ್ಯದಲ್ಲಿ ಬೆಳೆಯುತ್ತಿರುವ ಭದ್ರತಾ ಸವಾಲುಗಳನ್ನು ಎದುರಿಸಲು ಪೊಲೀಸ್ ಇಲಾಖೆಯ ಮೂಲಸೌಕರ್ಯವನ್ನು ಆಧುನೀಕರಿಸುವುದು ಸರ್ಕಾರದ ಆದ್ಯತೆಯಾಗಿದೆ. ರಾಜ್ಯ ಸರ್ಕಾರವು ನಾಗರಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಅತ್ಯುನ್ನತ ಆದ್ಯತೆಯಾಗಿ ಪರಿಗಣಿಸಿದ್ದು, ಪೊಲೀಸ್ ಇಲಾಖೆಯನ್ನು ತಂತ್ರಜ್ಞಾನ ಹಾಗೂ ಮೂಲಸೌಕರ್ಯದ ದೃಷ್ಟಿಯಿಂದ ಇನ್ನಷ್ಟು ಬಲಿಷ್ಠಗೊಳಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಲಾಗುತ್ತಿದೆ. ಈ ನಿರ್ಧಾರದಿಂದ ರಾಜ್ಯದ ಪೊಲೀಸ್ ವ್ಯವಸ್ಥೆ ಮತ್ತಷ್ಟು ಜನಸ್ನೇಹಿ, ಪರಿಣಾಮಕಾರಿ ಮತ್ತು ಆಧುನಿಕವಾಗಲಿದ್ದು, ಸಾರ್ವಜನಿಕ ಸೇವಾ ವಿತರಣೆಯಲ್ಲಿ ಹೊಸ ಗುಣಮಟ್ಟವನ್ನು ನಿರ್ಮಿಸಲಿದೆ ಎಂದು ಗೃಹ ಸಚಿವರು ಹೇಳಿದ್ದಾರೆ.

# ದಕ್ಷ, ಪ್ರಾಮಾಣಿಕರಿಗೆ ಉನ್ನತ ಹುದ್ದೆ ಖಚಿತ: ಅಮರಕುಮಾರ್ ಖಂಡ್ರೆ

ಕನ್ನಡ ಮಾತೃ ಭೂಮಿ ವಾರ್ತೆ



**ಬೀದರ್,** ದಕ್ಷತೆಯಿಂದ ಮತ್ತು ಪ್ರಮಾಣಿಕತೆಯಿಂದ ಸೇವೆ ಮಾಡಿದ್ದಲ್ಲಿ, ಉನ್ನತ ಹುದ್ದೆ ತನ್ನಿಂದ ತನಾಗಿಯೇ ಸಿಗುತ್ತದೆ ಎನ್ನುವುದನ್ನು ವಿಠಲರೆಡ್ಡಿ ತಂದೆ ಮುದ್ದಾರೆಡ್ಡಿ ಯಡಮಲ್ಲೆ ಅವರು ತೋರಿಸಿಕೊಟ್ಟಿದ್ದಾರೆ ಎಂದು ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷ ಅಮರಕುಮಾರ್ ಬಿ. ಖಂಡ್ರೆ ಅವರು ಹೇಳಿದರು.

ಡಿಸಿಸಿ ಬ್ಯಾಂಕಿನಲ್ಲಿ ವಿವಿಧ ಹುದ್ದೆಗಳಿಂದ ಬ್ಯಾಂಕಿನ ಉನ್ನತ ಹುದ್ದೆಯಾದ ಪ್ರಧಾನ ವ್ಯವಸ್ಥಾಪಕರಾಗಿ ನಿವೃತ್ತಿ ಹೊಂದಿದ ವಿಠಲರೆಡ್ಡಿ ತಂದೆ ಮುದ್ದಾರೆಡ್ಡಿ ಯಡಮಲ್ಲೆ ಅವರಿಗೆ ಬ್ಯಾಂಕಿನ ಆಡಳಿತ ಮಂಡಳಿ ಮತ್ತು ಎಲ್ಲ ಸಿಬ್ಬಂದಿ ವರ್ಗದ ಪರವಾಗಿ ಹಮ್ಮಿಕೊಂಡ ಬಿಳ್ಕೋಡುಗೆ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಠಲರೆಡ್ಡಿ ಅವರಲ್ಲಿ ನಾನು ಕಂಡಿರುವ ಒಂದು ವಿಶೇಷ ಗುಣವೆಂದರೇ ನಾನು ಬ್ಯಾಂಕಿಗೆ ಸಮಾಜಮುಖಿಯಾಗಿ ಕೆಲಸ ಮಾಡಿ

ಭೇಟಿ ನೀಡಿದಾಗ ಅವರು ನಾನು ಕೇಂದ್ರ ಸ್ಥಾನ ಬಿಟ್ಟ ತದನಂತರಲ್ಲಿಯೇ ಅವರು ನನ್ನ ಪರವಾನಿಗೆ ಪಡೆದು ಮನೆಗೆ ತೆರಳುತ್ತಿದ್ದರು. ಜೊತೆಗೆ ವಯೋನಿವೃತ್ತಿ ಹೊಂದುತ್ತಿರುವ ಅವರಿಗೆ ಆಯುರಾರೋಗ್ಯ ನೀಡಲೆಂದು ಶುಭ ಹಾರೈಸಿದರು.

ಬ್ಯಾಂಕಿನ ನಿರ್ದೇಶಕಿ ಹಾಗೂ ರಾಜ್ಯ ಸಹಕಾರ ಮಹಾ ಮಂಡಳದ ನಿರ್ದೇಶಕಿ ಶ್ರೀಮತಿ ಶಕುಂತಲಾ ಕಾಶಿನಾಥ ಬೆಲ್ದಾಳೆ ಅವರು ಮಾತನಾಡಿ, ಪ್ರಧಾನ ವ್ಯವಸ್ಥಾಪಕರು ಬ್ಯಾಂಕಿನಲ್ಲಿ ಕಳೆದ 25 ವರ್ಷಗಳಿಂದ ನನಗೆ ಚಿರಪರಿಚಿತರು, ಇವರ ಸೇವೆ ಶ್ಲಾಘನೀಯ ಸದಾ ಹಸನ್ಮುಖಿಯಾಗಿ ಕಾರ್ಯನಿರ್ವಹಿ ಸುತ್ತಿದ್ದರು, ಇದೀಗ ವಯೋನಿವೃತ್ತಿ ಹೊಂದುತ್ತಿದ್ದು, ನಿಮ್ಮ ಕುಟುಂಬಕ್ಕೂ ಸಮಯ ನೀಡಿ ಹಾಗೂ ಎನ್ನುವ ಸಂದೇಶ ನೀಡಿದರು,

ಬ್ಯಾಂಕಿನ ಉಪಾಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಅಭಿಷೇಕ ಆರ್. ಪಾಟೀಲ್ ಅವರು ಮಾತನಾಡಿ, ನಾವು ಬ್ಯಾಂಕಿನ ವಿಷಯದಲ್ಲಿ ಯಾವುದೇ ತರಹದ ಕೆಲಸ ಕಾರ್ಯಗಳಿದ್ದಲ್ಲಿ ಶ್ರೀ.ವಿಠಲರೆಡ್ಡಿ ರವರನ್ನೇ ಸಂಪರ್ಕಿಸುತ್ತಿದ್ದೇವು ಅವರು ನಮ್ಮ ಎಲ್ಲಾ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ಯಾವುದೇ ಅಡಚಣೆ ಮತ್ತು ಒತ್ತಡವಿಲ್ಲದೇಯೇ ಕೆಲಸ ಮಾಡಿರುವುದು ನೋಡಿದರೆ ಮುಂದೆ ಬರುವವರು ಸಹ ಇವರ ರೀತಿಯಲ್ಲೇ ಬ್ಯಾಂಕಿನ ಹಿತದೃಷ್ಟಿಯಿಂದ ಕೆಲಸ ಕಾರ್ಯಗಳು ಮಾಡಲಿ ಎಂದು ಹೇಳಿದರು.

ವಿಠಲರೆಡ್ಡಿ ಯಡಮಲ್ಲೆ ಅವರ ಪತ್ನಿ ಶ್ರೀಮತಿ ಬಬಿತಾ ಅವರು ಬ್ಯಾಂಕಿನ ಕಾರ್ಯ ಹಾಗೂ ದಕ್ಷತೆ, ಪ್ರಾಮಾಣಿಕತೆ ಕುರಿತು ಕೊಂಡಾಡಿದರು. ಆಡಿಟ್ ವಿಭಾಗದ ಉಪ ಪ್ರಧಾನ ವ್ಯವಸ್ಥಾಪಕ ಬಸವರಾಜ್ ಕಲ್ಯಾಣ್ ಅವರು ಹಿತನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಬಸವರಾಜ್ ಕಾಮಶೆಟ್ಟಿ, ಸಿದ್ದಾಜಿ ಶ್ರೀಪತರಾವ್, ಬಸವರಾಜ್ ನಾಗಶೆಟ್ಟಿ, ಭೀಮರೆಡ್ಡಿ ಬಸವರಾಜ್ ವರವಟ್ಟಿ, ವಿಜಯಕುಮಾರ್ ಅಣೆಪ್ಪ ಪಾಟೀಲ್, ಶ್ರೀಮತಿ ಡಾ. ನೀಲಾಂಬಿಕಾ, ವಿಷ್ಣುವರ್ಧನ್, ಮಂಜುನಾಥರೆಡ್ಡಿ, ಚಂದ್ರಪ್ಪ ಹವಾಲ್ದಾರ್, ದೀನ್ ದಯಾಳ್ ಮನ್ನಳ್ಳಿ, ರಾಜಕುಮಾರ್ ಅಣದೂರೆ, ರಾಜಶೇಖರಯ್ಯ, ಪಂಡರಿರೆಡ್ಡಿ, ಅನಿಲಕುಮಾರ್ ಪಾಟೀಲ್, ಅರವಿಂದ್ ಮರೂರಕರ್, ಸಂತೋಷ ಪೋಲಕಪಳ್ಳಿ ಮುಂತಾದವರು ಉಪಸ್ಥಿತರಿದ್ದರು. ಶ್ರೀಧರ್ ಕೋರವಾರ್ ಸ್ವಾಗತಿಸಿ, ವಂದಿಸಿದರು. ವೆಂಕಟರೆಡ್ಡಿ ರಾಮರೆಡ್ಡಿ ಅವರು ವರದಿ ವಾಚಿಸಿದರು. ಕರಣಕುಮರ್ ಚಂದನ್ ಅವರು ಕಾರ್ಯಕ್ರಮ ನಿರೂಪಿಸಿದರು.

# ಪೂರ್ಣಾವಧಿ ಪರಿಷತ್ ಸದಸ್ಯರಾಗಿ ಮಾತೆ ಮಾಣಿಕೇಶ್ವರಿ ಹೆಸರಿನಲ್ಲಿ ಕಮಕನೂರ್ ಪ್ರಮಾಣವಚನ

ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ,** ಪೂರ್ಣಾವಧಿ ರಾಜ್ಯ ವಿಧಾನ ಪರಿಷತ್ ಸದಸ್ಯರಾಗಿ ತಿಪ್ಪಣ್ಣಪ್ಪ ಕಮಕನೂರ್ ಅವರು ಗುರುವಾರ ಬೆಂಗಳೂರಿನ ಶಾಸಕರ ಭವನದಲ್ಲಿ ಮಾತಾ ಮಾಣಿಕೇಶ್ವರಿ ಅವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಅನೇಕ ಅಭಿಮಾನಿಗಳು ಹಾಗೂ ಬೆಂಬಲಿಗರು ಉಪಸ್ಥಿತರಿದ್ದು, ಪ್ರಮಾಣವಚನ ಸಮಾರಂಭದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು.

ಎರಡು ಬಾರಿ ಅಲ್ಪಾವಧಿಗೆ ರಾಜ್ಯ ವಿಧಾನ ಪರಿಷತ್ ಸದಸ್ಯರಾಗಿದ್ದ ತಿಪ್ಪಣ್ಣಪ್ಪ ಕಮಕನೂರ್ ಅವರು ಮೂರನೇ ಬಾರಿಗೆ ಪೂರ್ಣಾವಧಿಗೆ ಪರಿಷತ್‌ಗೆ ಆಯ್ಕೆಯಾ ಗಿದ್ದು, ಗುರುವಾರ ಪ್ರಮಾಣವಚನ ಸ್ವೀಕರಿಸಿದ್ದು, ಬೆಂಬಲಿಗರಲ್ಲಿ ಹರ್ಷವುಂಟು ಮಾಡಿತು.

ಪ್ರಮಾಣವಚನ ಸ್ವೀಕರಿಸಿದ ನಂತರ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ್ ಅವರು ಮಾಧ್ಯಮದವರೊಂದಿಗೆ ಮಾತ ನಾಡಿ, ನನಗೆ ಕೇವಲ ಕೋಲಿ ಸಮಾಜದವರು ಅಷ್ಟೇ ಅಲ್ಲ, ಎಲ್ಲ ಸಮಾಜದವರು ಬೆಂಬಲಿ ಸಿದ್ದಾರೆ. ಅವರ ವಿಶ್ವಾಸ ಹಾಗೂ ಸಹಕಾರ ಮತ್ತು ಬೆಂಬಲವನ್ನು ಮರೆಯಲಾರೆ. ಸರ್ವ ಸಮುದಾಯಗಳ ಕಲ್ಯಾಣಕ್ಕಾಗಿ ನಾನು ಸೇವೆ ಸಲ್ಲಿಸುವೆ ಎಂದರು.ಕೋಲಿ ಸಮಾಜದ ಬೇಡಿಕೆಗಳಿಗೆ ಸ್ಪಂದಿಸಲು ನಾನು ಆದ್ಯತೆ ನೀಡುವೆ. ಈಗಾಗಲೇ ಕಲಬುರ್ಗಿಯಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪನೆ ಯಾಗುತ್ತಿದೆ. ಅದೇ ರೀತಿ ಬೆಂಗಳೂರಿನ ವಿಧಾನಸೌಧ ಮುಂಭಾಗದಲ್ಲಿ ಪ್ರತಿಮೆ ಸ್ಥಾಪನೆಗೆ ಪ್ರಯತ್ನ ಮುಂದುವರೆಸುವೆ.

# ಬಳ್ಳಾರಿ: ಮುಂದುವರೆದ ಸರ್ಕಾರಿ ಜಾಗ ಒತ್ತುವರಿ ತೆರವು ಕಾರ್ಯಾಚರಣೆ

ಕನ್ನಡ ಮಾತೃ ಭೂಮಿ ವಾರ್ತೆ





**ಬಳ್ಳಾರಿ,** ನಗರದ ವಿವಿಧ ವಾರ್ಡ್ಗಳಲ್ಲಿರುವ ಕೋಟ್ಯಂತರ ರೂಪಾಯಿ ಮೌಲ್ಯದ ಸರ್ಕಾರಿ ಜಾಗ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಕಾಯ್ದಿರಿಸಿದ ಜಾಗಗಳಲ್ಲಿ ಅತಿಕ್ರಮವಾಗಿ ಆಕ್ರಮಿಸಿಕೊಂಡಿರುವುದನ್ನು ಖಚಿತಪಡಿಸಿಕೊಂಡು ಜಿಲ್ಲಾಡಳಿತ ಗುರುವಾರ ಒತ್ತುವರಿ ಕಾರ್ಯಾಚರಣೆ ನಡೆಸಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ನಿರ್ದೇಶನದಂತೆ ಅಪರ ಜಿಲ್ಲಾಧಿಕಾರಿ ಮುಹಮ್ಮದ್ ಝುಬೇರ್.ಎನ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಹಾಗೂ ತಹಶೀಲ್ದಾರ್ ಟಿ.ರೇಖಾ ನೇತೃತ್ವದ ಅಧಿಕಾರಿಗಳ ತಂಡವು ನಗರದ ವಿವಿಧೆಡೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಾರ್ವಜನಿಕ ಮತ್ತು ಸರ್ಕಾರಿ ಜಾಗಗಳನ್ನು ರಕ್ಷಿಸಲಾಯಿತು.

ಬೆಳ್ಳಂಬೆಳಗ್ಗೆ ವಿವಿಧ ಯಂತ್ರೋಪಕರಣಗಳ ಮೂಲಕ ಸರ್ಕಾರಕ್ಕೆ ಸೇರಬೇಕಾದ ಜಾಗಗಳನ್ನು ಜಿಲ್ಲಾಡಳಿತದ ವತಿಯಿಂದ ತೆರವುಗೊಳಿಸಲಾಯಿತು.

ಬಳ್ಳಾರಿ ನಗರದ ಸಿಟಿಎಸ್ ವಾರ್ಡ್ ನಂ. 21, ಬ್ಲಾಕ್ ನಂ. 03 ರ ಟಿ.ಎಸ್ ನಂ. 41 ರಲ್ಲಿದ್ದ 0.08 ಸೆಂಟ್ಸ್ ಜಾಗವನ್ನು ಅಂಗನವಾಡಿ ಕೇಂದ್ರಕ್ಕೆ ನಿಗದಿಪಡಿಸಲಾಗಿದ್ದು, ಇಲ್ಲಿ ಅತಿಕ್ರಮಣಗೊಂಡ ಜಾಗವನ್ನು ಸುಪರ್ದಿಗೆ ಪಡೆದುಕೊಂಡು ಅತಿಕ್ರಮಣದಾರರ ವಿರುದ್ಧ ಕಾನೂನು ಕ್ರಮ ಜರುಗಿಸುವುದಾಗಿ ಬೋರ್ಡ್ ಹಾಕಲಾಗಿದೆ.

ವಾರ್ಡ್ ನಂ. 22, ಬ್ಲಾಕ್ ನಂ. 11 ರ ಟಿ.ಎಸ್ ನಂ. 94 ವಿ ಯಲ್ಲಿರುವ ಸುಮಾರು 0.49.6 ಸೆಂಟ್ಸ್ ವಿಸ್ತೀರ್ಣದ ಕರ್ನಾಟಕ ಸರ್ಕಾರದ ಬಯಲು ಜಾಗವನ್ನು ಜಿಲ್ಲಾಡಳಿತ ತೆರವುಗೊಳಿಸಿದೆ.

ಅದೇ ರೀತಿ ವಾರ್ಡ್ ನಂ. 21, ಬ್ಲಾಕ್ ನಂ. 03 ರ ಟಿ.ಎಸ್ ನಂ. 43 ರ ಪೈಕಿ ವಿ ಯಲ್ಲಿರುವ 0.75 ಸೆಂಟ್ಸ್ ಜಾಗವು ಸಂಪೂರ್ಣ ಸರ್ಕಾರಿ ಸ್ವತ್ತಾಗಿದ್ದು, ಅಕ್ರಮ ಪ್ರವೇಶ ಅಥವಾ ಒತ್ತುವರಿ ಮಾಡುವವರ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಲಾಗಿದೆ.

ನಗರದ ಬುಡಾ ಪಾರ್ಕ್, ನಾರಾಯಣಪ್ಪ ಕಾಂಪೌಅಡ್, ಕೋಟೆ ಪ್ರದೇಶ ಹಾಗೂ ಸಿದ್ದಾರ್ಥ ನಗರ, ದೇವಿ ನಗರದ ಸರ್ಕಾರಿ ಜಾಗಗಳಿಗೆ ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿಗಳೊಅದಿಗೆ ಭೇಟಿ ನೀಡಿ ಒತ್ತುವರಿ ತೆರವು ಹಾಗೂ ರಕ್ಷಣಾ ಕಾರ್ಯ ಕೈಗೊಂಡರು.

ಸರ್ಕಾರಿ ಆಸ್ತಿಯನ್ನು ಸಾರ್ವಜನಿಕರ ಹಿತಬಲಿಗಾಗಿ ಕಾಯ್ದಿರಿಸಲಾಗಿದ್ದು, ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳು ಇದನ್ನು ಅಕ್ರಮವಾಗಿ ವಶಪಡಿಸಿಕೊಳ್ಳಲು ಯತ್ನಿಸಿದರೆ ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಡಳಿತ ತಿಳಿಸಿದೆ.

ತೆರವು ಕಾರ್ಯಾಚರಣೆ ಸಂದರ್ಭದಲ್ಲಿ ಡಿಡಿಎಲ್ಆರ್ ಪ್ರಮೋದ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಿ.ಖಲೀಲ್ ಸಾಬ್ ಸೇರಿದಂತೆ ಇತರರಿದ್ದರು.

# ಎಸ್ಐಆರ್ ಪ್ರಕ್ರಿಯೆ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಿದ ಡಿಸಿ ನಾಗೇಂದ್ರ ಪ್ರಸಾದ್

ಕನ್ನಡ ಮಾತೃ ಭೂಮಿ ವಾರ್ತೆ



**ಬಳ್ಳಾರಿ,** ದೇಶಾದ್ಯಂತ ಸಾರ್ವತ್ರಿಕ ಚುನಾವಣೆಗಳು ಹಾಗೂ ಪ್ರಜಾಪ್ರಭುತ್ವದ ಪ್ರಕ್ರಿಯೆಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ಅತ್ಯಂತ ಮಹತ್ವದ್ದಾಗಿದೆ. ಈ ಹಿನ್ನೆಲೆಯಲ್ಲಿ, ನಿಮ್ಮ ನಿಮ್ಮ ಭಾಗದ ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡುತ್ತಿದ್ದು, ಸಾರ್ವಜನಿಕರು ತಪ್ಪು ಮಾಹಿತಿಗೆ ಆಸ್ಪದ ನೀಡದೆ ನಿಖರವಾದ ವಿವರಗಳನ್ನು ಒದಗಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ನೀಡುವ ನಮೂನೆ ಭರ್ತಿ ಮಾಡುವ ಕುರಿತು, ಬಳ್ಳಾರಿ ನಗರದ ಶ್ರೀರಾಂಪುರ ಕಾಲೋನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಆವರಣದಲ್ಲಿ ಬುಧವಾರ ಸಂಜೆ ಸಾರ್ವಜನಿಕರಿಗೆ ಅರಿವು ಮೂಡಿಸುತ್ತಾ ಅವರು ಮಾತನಾಡಿದರು.

ಮತದಾರರ ಪಟ್ಟಿಯಲ್ಲಿರುವ ಪ್ರತಿಯೊಬ್ಬರ ಹೆಸರನ್ನು ಮರುಪರಿಶೀಲಿಸಲು ಬಿಎಲ್ಒಗಳು ನಿಮ್ಮ ಮನೆಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು ಒಂದು ನಿರ್ದಿಷ್ಟ ನಮೂನೆ (ಫಾರ್ಮ್) ಅನ್ನು ನೀಡುತ್ತಾರೆ. ಈ ಫಾರ್ಮ್ನಲ್ಲಿ ಮತದಾರರ ಪಟ್ಟಿಯಲ್ಲಿ ಈಗಾಗಲೇ ಇರುವ ನಿಮ್ಮ ಹೆಸರಿನ ವಿವರಗಳಿರುತ್ತವೆ. ಅಧಿಕಾರಿಗಳ ಬಳಿ ಈಗಾಗಲೇ ಇರುವ ಮಾಹಿತಿಯ ಜೊತೆಗೆ, ನಿಮ್ಮಲ್ಲಿಲ್ಲದ ಅಥವಾ ಪಟ್ಟಿಗೆ ಅಗತ್ಯವಿರುವ ಹೆಚ್ಚುವರಿ ವಿವರಗಳನ್ನು ನೀವು ಭರ್ತಿ ಮಾಡಿಕೊಡಬೇಕಾಗುತ್ತದೆ ಎಂದು ಅವರು ತಿಳಿಸಿದರು.

ಮಾಹಿತಿ ಭರ್ತಿ ಮಾಡಿದ ನಂತರ ಫಾರ್ಮ್ ಮೇಲೆ ನಿಮ್ಮ ಸಹಿ ಪಡೆಯಲಾಗುತ್ತದೆ. ಸಹಿ ಮಾಡಲು ಬಾರದಿದ್ದಲ್ಲಿ ಹೆಬ್ಬೆರಳಿನ ಗುರುತನ್ನು ನೀಡಲು ಅವಕಾಶವಿರುತ್ತದೆ. ಒಂದು ವೇಳೆ ಬಿಎಲ್ಒಗಳು ಬಂದಾಗ ಮನೆಯಲ್ಲಿ ಯಾರೂ ಇಲ್ಲದಿದ್ದರೆ, ಗಾಬರಿಪಡುವ ಅಗತ್ಯವಿಲ್ಲ. ಅವರು ಕನಿಷ್ಠ ಎರಡು ಬಾರಿ ನಿಮ್ಮ ಮನೆಗೆ ಮರುಭೇಟಿ ನೀಡಲಿದ್ದಾರೆ. ಆದಾಗ್ಯೂ ನೀವು ಸಿಗದಿದ್ದರೆ, ನಿಮ್ಮ ಮನೆಯ ಬಾಗಿಲಿಗೆ ತಮ್ಮ ಫೋನ್ ನಂಬರ್ ಇರುವ ನೋಟಿಸ್ ಅಥವಾ ಫಾರ್ಮ್ ಅನ್ನು ಅಂಟಿಸಿ ಹೋಗುತ್ತಾರೆ. ನೀವು ಆ ನಂಬರ್‌ಗೆ ಕರೆ ಮಾಡಿ, ಅವರೊಂದಿಗೆ ಚರ್ಚಿಸಿ ಫಾರ್ಮ್ ಭರ್ತಿ ಮಾಡಬಹುದು. ಈ ಪ್ರಕ್ರಿಯೆಯು ಚಾಲ್ತಿ ತಿಂಗಳ 29ನೇ ತಾರೀಖಿನವರೆಗೆ ಮುಂದುವರಿಯಲಿದೆ ಎಂದರು.

ಈ ಪರಿಷ್ಕರಣಾ ಪ್ರಕ್ರಿಯೆಯು ಕೇವಲ ಹಾಲಿ ಮತದಾರರಿಗೆ ಮಾತ್ರ ಸೀಮಿತವಾಗಿಲ್ಲ. ಹೊಸದಾಗಿ ಹೆಸರು ಸೇರಿಸುವವರಿಗೂ ಇಲ್ಲಿ ಅವಕಾಶ ಕಲ್ಪಿಸಲಾಗಿದೆ. ಈಗಿನ ಪರಿಷ್ಕರಣೆ ಮುಗಿದ ಒಂದು ತಿಂಗಳ ನಂತರ, ಹೊಸದಾಗಿ ವಲಸೆ ಬಂದವರು ಅಥವಾ ಮತದಾನದ ಹಕ್ಕು ಪಡೆದವರು ನಮೂನೆ-6 ಅನ್ನು ಭರ್ತಿ ಮಾಡುವ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಇತ್ತೀಚೆಗೆ ವಿವಾಹವಾಗಿ ಹೊಸದಾಗಿ ಪತಿಯ ಮನೆಗೆ ಬಂದಿರುವ ಮಹಿಳೆಯರು, ತಮ್ಮ ತಂದೆಯ ಮನೆಯಲ್ಲಿದ್ದ ಮತದಾರರ ಗುರುತಿನ ಚೀಟಿಯ ವಿವರಗಳೊಂದಿಗೆ, ಭಾವಚಿತ್ರ ಸಹಿತ ಅರ್ಜಿಯನ್ನು ಬಿಎಲ್ಒಗಳ ಜೊತೆ ಚರ್ಚಿಸಿ ಸಲ್ಲಿಸಬೇಕು. ತನ್ಮೂಲಕ ಹಳೆಯ ಜಾಗದಿಂದ ಹೆಸರನ್ನು ತೆಗೆದು ಹೊಸ ಜಾಗಕ್ಕೆ ಸೇರಿಸಲು ಅನುಕೂಲವಾಗುತ್ತದೆ ಎಂದರು.

ಹಲವು ವರ್ಷಗಳ ಹಿಂದೆ ಮತದಾರರ ಪಟ್ಟಿಗೆ ಸೇರಿದವರ ಗುರುತಿನ ಚೀಟಿಯಲ್ಲಿ ಬಾಲ್ಯದ ಅಥವಾ ಹಳೆಯ ಭಾವಚಿತ್ರಗಳಿರುತ್ತವೆ. ಪ್ರಸ್ತುತ ಮುಖಚರ್ಯೆಗೆ ಹೊಂದುವಅತೆ ಹೊಸ ಫೋಟೋವನ್ನು ಅಪ್‌ಡೇಟ್ ಮಾಡಲು ಈ ಪ್ರಕ್ರಿಯೆಯಲ್ಲಿ ಅವಕಾಶವಿದೆ. ಸಾರ್ವಜನಿಕರು ಬಿಎಲ್ಒಗಳು ಕೇಳಿದಾಗ ಎರಡು ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ನೀಡುವ ಮೂಲಕ ಪಟ್ಟಿಯಲ್ಲಿ ತಮ್ಮ ಹೊಸ ಫೋಟೋವನ್ನು ಅಳವಡಿಸಿಕೊಳ್ಳಬಹುದು ಎಂದರು.

ಮತದಾನದ ಹಕ್ಕು ಪ್ರತಿಯೊಬ್ಬ ಪ್ರಜೆಯ ಕರ್ತವ್ಯ. ಮತದಾರರ ಪಟ್ಟಿಯಿಂದ ನಿಮ್ಮ ಹೆಸರು ಯಾವುದೇ ಕಾರಣಕ್ಕೂ ಕೈಬಿಟ್ಟು ಹೋಗದಂತೆ ನೋಡಿಕೊಳ್ಳುವುದು ನಿಮ್ಮದೇ ಜವಾಬ್ದಾರಿಯಾಗಿದೆ. ಹಾಗಾಗಿ, ನಿಮ್ಮ ಏರಿಯಾದ ಬಿಎಲ್ಒಗಳು ಮನೆಗೆ ಬಂದಾಗ ಸೂಕ್ತ ಮಾಹಿತಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಯವರು ಕೋರಿದರು.

ಬಳಿಕ ಕಾಲೋನಿಯ ನಿವಾಸಿಯಾದ ಈ.ಕೃಷ್ಣ ಮತ್ತು ಪತ್ನಿ ನಾಗಲಕ್ಷ್ಮಿ ಅವರಿಗೆ ಸೆಲ್ಫ್ ಎನ್ಯುಮರೇಶನ್ ಫಾರ್ಮ್ ವಿತರಿಸಿದರು. ಇದೇ ವೇಳೆ ಜಿಲ್ಲಾಧಿಕಾರಿಯವರು ಸಾರ್ವಜನಿಕರ ಆಹವಾಲು ಆಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಶಶಿಕಾಂತ್ ಶಿವಪುರೆ, ಜಿಪಂ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ, ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ನಿರಂಜನ್ ಸೇರಿದಂತೆ ಬಿಎಲ್ಒ ಅಧಿಕಾರಿಗಳು, ಬಿಎಲ್ಎ ಏಜೆಂಟ್ ಹಾಗೂ ಸಾರ್ವಜನಿಕರು ಇದ್ದರು.

# ಕಾಂಗ್ರೆಸ್ ಪಕ್ಷದಲ್ಲಿ ರೇಟ್ ಫಿಕ್ಸ್, ಸಂಪುಟ ವಿಸ್ತರಣೆಗೆ ಡೇಟ್ ಫಿಕ್ಸ್ ಆಗುತ್ತಿಲ್ಲ: ಬಿ.ವೈ.ವಿಜಯೇಂದ್ರ

**ಬೆಂಗಳೂರು,ಜು.3**-ಕಾಂಗ್ರೆಸ್ ಪಕ್ಷದಲ್ಲಿ ರೇಟ್ ಫಿಕ್ಸ್ ಆಗಿದೆ. ಸಂಪುಟ ವಿಸ್ತರಣೆಗೆ ಡೇಟ್ ಫಿಕ್ಸ್ ಆಗುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ಬಿಜೆಪಿ ಮಲ್ಲೇಶ್ವರಂ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಬೆಳೆ ಬೆಳೆಯದಿರಿ ಎಂದು ಮುಖ್ಯಮಂತ್ರಿ ನೀಡಿದ ಹೇಳಿಕೆ ರೈತರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಮಾಡಿದೆ. ನಿನ್ನೆ ಈ ನಾಡಿನ ದೊರೆ, ಮುಖ್ಯಮಂತ್ರಿ ಒಂದು ಹೇಳಿಕೆ ಕೊಟ್ಟಿದ್ದಾರೆ. ನೀರಿಲ್ಲ; ಬೆಳೆ ಬೆಳೆಯುವುದು ಬೇಡ. ಭೀಕರ ಬರಗಾಲದ ಮುನ್ಸೂಚನೆ ವಿಚಾರವನ್ನು ಸಂಪುಟದಲ್ಲಿ ಚರ್ಚಿಸಿ ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲದ ಕಾರಣ ರೈತರು ಬೆಳೆ ಬೆಳೆಯದಿರಿ ಎಂದು ಸ್ವತಃ ಮುಖ್ಯಮಂತ್ರಿ ಹೇಳಿದ್ದು ಬಹಳ ಆಶ್ಚರ್ಯ ಮಾತ್ರವಲ್ಲದೇ ಅತ್ಯಂತ ನೋವನ್ನು ತಂದಿದೆ. ನಾವೇನೇ ಹೇಳಿಕೆ ನೀಡಿದರೂ ಪ್ರಬುದ್ಧತೆಯಿಂದ ಮಾತನಾಡಬೇಕು ಎಂದು ವಿನಂತಿಸಿದರು. ಇಡೀ ದೇಶದಲ್ಲಿ ಬರಗಾಲದ ಛಾಯೆ ಮೂಡಿದೆ. ಪ್ರಕೃತಿ ಮುನಿಸಿಕೊಂಡ ಸಂದರ್ಭದಲ್ಲಿ ರಾಜ್ಯದ ರೈತರಿಗೆ ಅಭಯ, ಭರವಸೆಯನ್ನು ಸರಕಾರ ನೀಡಬೇಕಿತ್ತು. ಮುಂದಿನ 15-20 ದಿನ ಮಳೆ ಬೀಳುವ ಆಶಾಭಾವ ಇದೆ. ಮುಖ್ಯಮಂತ್ರಿ ಹೇಳಿದರೆಂದು ಬಿತ್ತನೆಯೇ ಮಾಡದೇ ಇದ್ದರೆ ಯಾರು ಹೊಣೆಗಾರರು ಎಂದು ಕೇಳಿದರು. ಶೇ. 50- 60 ಮಳೆ ಕಡಿಮೆ ಇರುವಾಗ ರಾಜ್ಯ ಸರಕಾರದ ಆದ್ಯತೆ ಏನು? ಇವರೇನಾದರೂ ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಿದ್ದಾರಾ? ರೈತರಿಗೆ ಸ್ಪಂದಿಸುವ ನಿಟ್ಟಿನಲ್ಲಿ ಜಾನುವಾರುಗಳಿಗೆ ಸಂಬಂಧಿಸಿ ಅನುದಾನ ಬಿಡುಗಡೆ ಮಾಡಿದ್ದಾರಾ? ಬರಗಾಲದ ಮುನ್ಸೂಚನೆ ವಿಚಾರ ರಾತ್ರೋರಾತ್ರಿ ಜ್ಞಾನೋದಯ ಆಗಿದೆಯೇ? ಯಾಕೆ ಈ ರೀತಿ ಕಪಟ ನಾಟಕ ಆಡುತ್ತಿದ್ದೀರಿ? ಮುಖ್ಯಮಂತ್ರಿ ರೈತ ಪರವಾಗಿಲ್ಲದೇ ರಿಯಲ್ ಎಸ್ಟೇಟ್ ಪರ ಆದರೆ ರಾಜ್ಯದ ಹಣೆಬರಹ ಇದೇ ಆಗುತ್ತದೆ ಎಂದು ಆಕ್ಷೇಪಿಸಿದರು. ಹೀಗಿರುವಾಗ ನಮ್ಮ ಜಲಾಶಯದಿಂದ ತಮಿಳುನಾಡಿಗೆ ನೀರು ಬಿಡುವ ದುಸ್ಸಾಹಸಕ್ಕೆ ಯಾಕೆ ಕೈ ಹಾಕಿದ್ದೀರಿ ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿ ಇದರ ಬಗ್ಗೆ ಗಂಭೀರವಾಗಿ ಚಿಂತಿಸಬೇಕು. ರೈತರಿಗೆ ಕೊಡಬೇಕಾದ ಯೋಜನೆ, ಆಡಳಿತ ಸನ್ನದ್ಧತೆ ಕಡೆಗೆ ಗಮನಿಸದೇ ಮುಖ್ಯಮಂತ್ರಿ ಕೈಚೆಲ್ಲಿ ಕೂತರೆ ಹೇಗೆ? ಎಸ್‌ಐಆರ್ ಇರುವ ಕಾರಣ ಆಗಸ್ಟ್ ಮಧ್ಯದಲ್ಲಿ ಮುಂಗಾರು ಅಧಿವೇಶನ ಮಾಡುವುದಾಗಿ ಹೇಳಿದ್ದಾರೆ. ಶಾಸಕರು ಮನೆ ಮನೆಗೆ ತೆರಳಿ ಎಸ್‌ಐಆರ್ ಮಾಡುತ್ತಾರಾ? ಇದೇ ಕಾರಣಕ್ಕೆ ಅಧಿವೇಶನ ಮುಂದೂಡುತ್ತಿದ್ದಾರೆ. ಸಿದ್ದರಾಮಯ್ಯ ಅವರದ್ದು ಪೂರ್ಣ ಸಂಪುಟ ಇದ್ದರೂ ನೆರೆ ಬಂದಾಗ ರೈತರ ಸಂಕಷ್ಟಕ್ಕೆ ಸ್ಪಂದಿಸಿರಲಿಲ್ಲ ಎಂದು ದೂರಿದರು.

ಹಾನಗಲ್ ತಾಲೂಕಿನ ನರೇಗಲ್‌ನಲ್ಲಿ ಹಾಲುಮತ ಸಮಾಜದ ಒಂದೇ ಕುಟುಂಬದ ಆರು ಜನರ ಮೇಲೆ ಮಾರಣಾಂತಿಕ ಹಲ್ಲೆ ನಡೆದಿದೆ. ಮತ್ತೊಂದೆಡೆ ರಟ್ಟಿಹಳ್ಳಿಯಲ್ಲಿ ಮರಾಠ ಸಮಾಜದ ಬಡ ಕುಟುಂಬದ ಶಿವಾಜಿ ರಾವ್ ಅವರನ್ನು ಹಾಡಹಗಲೇ ಒದ್ದು ಪ್ರಾಣ ತೆಗೆಯುವ ಕೆಲಸ ಆಗಿದೆ. ಚಿಕ್ಕಬಳ್ಳಾಪುರದಲ್ಲಿ ಲವ್ ಜಿಹಾದ್‌ಗೆ ಒಳಗಾಗಿ ಫಿಸಿಯೋಥೆರಪಿಸ್ಟ್ ಕೊಲೆಯಾಗಿದೆ. ಮುಖ್ಯಮಂತ್ರಿ ಡಿ.ಕೆ. ಸಾಫ್ಟ್ ಹಿಂದುತ್ವವಾದ, ಗೃಹಸಚಿವ ಪಿ.ಕೆ. ಮತ್ತು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಅವರ ಹಿಂದೂ ವಿರೋಧಿ ನೀತಿ- ಇವರ ಹೇಳಿಕೆಗಳು ಮತೀಯ ಶಕ್ತಿಗಳಿಗೆ ಧೈರ್ಯ ನೀಡುತ್ತಿದೆ ಎಂದು ಟೀಕಿಸಿದರು. ಕಾಂಗ್ರೆಸ್ ಸರಕಾರದ ಅಲ್ಪಸಂಖ್ಯಾತರ ಓಲೈಕೆಯೇ ಇದಕ್ಕೆ ಕಾರಣ ಎಂದು ಆಕ್ಷೇಪಿಸಿದರು.

ಬಿಎಲ್‌ಒಗಳು ಕಾಂಗ್ರೆಸ್ ಪರ ಪ್ರಚಾರಕ್ಕೆ ಬಳಕೆ: ಮಸೀದಿಯಲ್ಲಿ ಕೂರಿಸಿ ಎಸ್‌ಐಆರ್ ಪ್ರಕ್ರಿಯೆ ವಿಚಾರವಾಗಿ ಪ್ರತಿಕ್ರಿಯಿಸಿ, ಎಸ್‌ಐಆರ್ ಅಡಿ ಬಿಎಲ್‌ಒಗಳ ದುರುಪಯೋಗ ಆಗುತ್ತಿದೆ. ಅಧಿಕಾರಿಗಳನ್ನು ಮಸೀದಿಯಲ್ಲಿ ಕೂರಿಸಿ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಳಿಸುತ್ತಿದೆ. ರಾಜ್ಯ ಸರ್ಕಾರದಿಂದ ಹಿಂದೂಗಳ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ. ಸಾಗರದಲ್ಲಿ ಬಿಎಲ್‌ಒಗಳನ್ನು ಕಾಂಗ್ರೆಸ್ ಪರ ಪ್ರಚಾರಕ್ಕೆ ಬಳಸಿಕೊಳ್ಳುತ್ತಿದ್ದಾರೆ. ಮುಖ್ಯಮಂತ್ರಿ ಇದನ್ನು ಸರಿಪಡಿಸಬೇಕೆಂದು ಆಗ್ರಹಿಸಿದರು. ಎಸ್‌ಐಆರ್ ವಿಚಾರದಲ್ಲಿ ಚಾಮರಾಜಪೇಟೆ ಮೊದಲಾದ ಕಡೆ ಆಗುತ್ತಿರುವ ಗೊಂದಲದ ಸಂಬಂಧ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇವೆ. ಇದನ್ನು ಚುನಾವಣಾ ಅಧಿಕಾರಿಗಳು ಸರಿಪಡಿಸಲಿ. ಕ್ಯಾಬಿನೆಟ್ ವಿಸ್ತರಿಸಿದರೆ ಈ ಸರ್ಕಾರದ ಬುಡ ಅಲ್ಲಾಡುವ ವಾಸ್ತವಿಕ ಸತ್ಯ ಸಿಎಂಗೆ ಗೊತ್ತಿದೆ. ಹಾಗಾಗಿ ಎಸ್‌ಐಆರ್ ನೆಪ ಒಡ್ಡಿದ್ದಾರೆ. ರಾಹುಲ್ ಗಾಂಧಿಯವರು 12 ತಿಂಗಳಲ್ಲಿ 8 ತಿಂಗಳು ವಿದೇಶದಲ್ಲೇ ಇರುತ್ತಾರೆ. ಸ್ವದೇಶದಲ್ಲಿ ಯಾವಾಗ ಇರುತ್ತಾರೆ ಎಂದು ಪ್ರಶ್ನಿಸಿದರು. ಒಂದು ಮ್ಯಾನೇಜ್‌ಮೆಂಟ್ ಕೋಟಾ, ಇನ್ನೊಂದು ಪೇಮೆಂಟ್ ಕೋಟಾ ಇರುವುದಾಗಿ ಹಿಂದೆಯೂ ಹೇಳಿದ್ದೆ ಎಂದು ಆರೋಪಿಸಿದರು.

# ಬಿಎಲ್‌ಒಗಳು ಕಡ್ಡಾಯವಾಗಿ ಮನೆ ಮನೆಗೆ ತೆರಳಿ ಫಾರಂ ಕೊಡ್ಬೇಕು: ರಾಜ್ಯ ಮುಖ್ಯ ಚುನಾವಣಾಧಿಕಾರಿ ಖಡಕ್ ಸೂಚನೆ

**ಬೆಂಗಳೂರು,ಜು.3**-ಬಿಎಲ್‌ಒಗಳು ಕಡ್ಡಾಯವಾಗಿ ಮನೆ ಮನೆಗೆ ತೆರಳಿ ಫಾರಂ ಕೊಡಬೇಕು ಎಂದು ರಾಜ್ಯ ಮುಖ್ಯ ಚುನಾವ ಣಾಧಿಕಾರಿ ವಿ. ಅನ್ಬುಕುಮಾರ್ ಖಡಕ್ ಸೂಚನೆ ನೀಡಿದ್ದಾರೆ.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಮೂರನೇ ದಿನಕ್ಕೆ ಕಾಲಿಟ್ಟಿದೆ. ಬಿಎಲ್‌ಒಗಳು ಮನೆಗಳಿಗೆ ತೆರಳದೇ ರಸ್ತೆಗಳಲ್ಲಿ ಟೆಂಟ್ ಹಾಕಿಕೊಂಡು ಕುಳಿತಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದ್ದವು.ಜುಲೈ 2 ರಂದು ಬಂದಿರುವ ದೂರುಗಳನ್ನು ಆಧರಿಸಿ ಇಂದು ರಾಜ್ಯದ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು, ಡೆಪ್ಯುಟಿ ಕಮಿಷನರ್‌ಗಳು ಹಾಗೂ ಜಿಬಿಎ ಮುಖ್ಯ ಆಯುಕ್ತರಿಗೆ ಅಧಿಕೃತ ಸುತ್ತೋಲೆ ರವಾನಿಸಿರುವ ಸಿಇಒ, ಭಾರತೀಯ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಖಡಕ್ ಸೂಚನೆ ನೀಡಿದ್ದಾರೆ. ಭಾರತೀಯ ಚುನಾವಣಾ ಆಯೋಗದ ನಿರ್ದೇಶನ ಹಾಗೂ ವೇಳಾಪಟ್ಟಿಯ ಪ್ರಕಾರ ಕರ್ನಾಟಕದಲ್ಲಿ ಜೂನ್ 30 ರಿಂದಲೇ ಮತದಾರರಿಗೆ ಎನ್ಯೂಮರೇಶನ್ ಫಾರಂಗಳನ್ನು ವಿತರಿಸುವ ಪ್ರಕ್ರಿಯೆ ಆರಂಭವಾಗಿದೆ. ಆದರೆ, ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಫಾರಂ ಹಂಚುವ ಬದಲು, ಕಚೇರಿಗಳಲ್ಲೇ ಕುಳಿತು ವಿತರಿಸುತ್ತಿದ್ದಾರೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ಪತ್ರ ಬರೆದಿರುವ ಸಿಇಒ ವಿ. ಅನ್ಬುಕುಮಾರ್, ಎಲ್ಲಾ ಬಿಎಲ್‌ಒಗಳು ಕಡ್ಡಾಯವಾಗಿ ಪ್ರತಿಯೊಬ್ಬ ಮತದಾರನ ಮನೆ ಬಾಗಿಲಿಗೆ ಭೇಟಿ ನೀಡಿ ಫಾರಂ ವಿತರಿಸಬೇಕು. ವಿಶೇಷ ತೀವ್ರ ಪರಿಷ್ಕರಣೆಯ ಎಲ್ಲಾ ಹಂತಗಳಲ್ಲೂ ಇಸಿಐ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಅಧಿಕಾರಿಗಳು ಅಗತ್ಯ ನಿರ್ದೇಶನ ನೀಡಬೇಕು ಎಂದು ಆದೇಶಿಸಿದ್ದಾರೆ.

# ಎಸ್‌ಐಆರ್ ನಲ್ಲಿ ಆಡಳಿತ ಯಂತ್ರ ದುರುಪಯೋಗ, ಹೊರಗಿನ ಅಧಿಕಾರಿಗಳಿಗೆ ಉಸ್ತುವಾರಿ ಕೊಡಿ-ಹೆಚ್‌ಡಿಕೆ

■ ಕನ್ನಡ ಮಾತೃ ಭೂಮಿ ವಾರ್ತೆ



**ಬೆಂಗಳೂರು,**ರಾಮನಗರ ಸೇರಿದಂತೆ ರಾಜ್ಯದ ವಿವಿಧೆಡೆ ರಾಜ್ಯ ಸರ್ಕಾರ ಕೇಂದ್ರೀಯ ಚುನಾವಣಾ ಆಯೋಗದ ಮಾರ್ಗಸೂಚಿಯನ್ನು ಗಾಳಿಗೆ ತೂರಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ (ಖಐಐ) ಪ್ರಕ್ರಿಯೆಯನ್ನು ನಡೆಸುತ್ತಿದ್ದು, ಆಡಳಿತ ಯಂತ್ರವನ್ನು ಸಂಪೂರ್ಣವಾಗಿ ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ.

ಜೆಡಿಎಸ್ ಪಕ್ಷದ ರಾಜ್ಯ ಕಚೇರಿ ಜೆ.ಪಿ.ಭವನದಲ್ಲಿ ತುರ್ತು ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಕೇಂದ್ರ ಸಚಿವರು, ಕೆಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು ರಾಜ್ಯ ಸರ್ಕಾರದ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ. ಈ ಬಗ್ಗೆ ಕೇಂದ್ರ ಚುನಾವಣಾ ಆಯುಕ್ತರಿಗೆ ಖುದ್ದು ನಾನೇ ಹೋಗಿ ದೂರು ನೋಡುತ್ತೇನೆ. ಇಡೀ ಎಸ್‌ಐಆರ್ ಅಕ್ರಮದ ಮೂಲ ಸೂತ್ರಧಾರಿ ಈ ರಾಜ್ಯದ ಮುಖ್ಯಮಂತ್ರಿಯೇ ಆಗಿದ್ದಾರೆ ಎಂದು ದೂರಿದರು.

ಬೆಂಗಳೂರು ನಗರದ ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ನಡೆಯುತ್ತಿರುವ ಎಸ್‌ಐಆರ್‌ನ ಅಕ್ರಮ ಪ್ರಕ್ರಿಯೆಯ ವಿಡಿಯೋ ದಾಖಲೆಗಳ ಮಾಹಿತಿ ನೀಡಿ ಅದಕ್ಕೆ ಸಂಬಂಧಿಸಿದ ವಿಡಿಯೋಗಳನ್ನು ಮಾಧ್ಯಮಗಳ ಮುಂದೆ ಪ್ರದರ್ಶಿಸಿದರು. ಈ ಸರ್ಕಾರವು ಅಧಿಕಾರಿಗಳನ್ನು ಗುಲಾಮರಂತೆ ನಡೆಸಿಕೊಳ್ಳುತ್ತದೆ. ಅವರನ್ನು ಹೆದರಿಸಿ ಬೆದರಿಸಿ ತನಗೆ ಬೇಕಾದ ಹಾಗೆ ಎಸ್‌ಐಆರ್ ಮಾಡಿಸಿಕೊಳ್ಳುತ್ತಿದೆ. ಆದ್ದರಿಂದ ಈ ಕೂಡಲೇ ರಾಜ್ಯದ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆಯ ಪ್ರಕ್ರಿಯೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಮಧ್ಯಪ್ರವೇಶಿಸಬೇಕು ಹಾಗೂ ಈವರೆಗೂ ಆಗಿರುವ ಪರಿಷ್ಕರಣೆಯನ್ನು ಸಂಪೂರ್ಣವಾಗಿ ಕೈಬಿಟ್ಟು ಹೊಸದಾಗಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಬೇಕು. ರಾಮನಗರ, ಬೆಂಗಳೂರು ನಗರ ಜಿಲ್ಲೆಗಳ ಜಿಲ್ಲಾಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು. ಯಶವಂತಪುರ ವಿಧಾನಸಭೆ ಕ್ಷೇತ್ರದಲ್ಲಿ ನೇರವಾಗಿ ಕ್ಷೇತ್ರದ ಶಾಸಕರ ಸೂಚನೆಯ ಮೇರೆಗೆ ಅಕ್ರಮವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದೆ. ಕಾಂಗ್ರೆಸ್ ಕಾರ್ಯಕರ್ತರು ಮತ್ತು ಪರಿಷ್ಕರಣೆ ಸಿಬ್ಬಂದಿ ಪರಸ್ಪರ ಶಾಮೀಲಾಗಿ ಪುಷ್ಕರಣೆಯನ್ನು ಸಂಪೂರ್ಣವಾಗಿ ತಿರುಚುತ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ರಾಜ್ಯದಲ್ಲಿ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಪಾರದರ್ಶಕವಾಗಿ ನಡೆಯುತ್ತಿಲ್ಲ ಹಾಗೂ ಸಿಬ್ಬಂದಿ ಮನೆಮನೆಗೂ ತೆರಳಿ ಮಾಹಿತಿ ಪಡೆಯುತ್ತಿಲ್ಲ. ರಾಜ್ಯ ಕಾಂಗ್ರೆಸ್ ಸರ್ಕಾರ ಪರಿಷ್ಕರಣೆ ಸಿಬ್ಬಂದಿಯ ಮೇಲೆ ಒತ್ತಡ ತಂದು ತನಗೆ ಬೇಕಾದ ಹಾಗೆ ಮನಸೋ ಇಚ್ಛೆಯಂತೆ ಮತದಾರರ ಪಟ್ಟಿಯನ್ನು ಪರಿಷ್ಕರಣೆ ಮಾಡಿಸಿಕೊಳ್ಳುತ್ತಿದೆ. ಇದು ಕೇಂದ್ರೀಯ ಚುನಾವಣಾ ಆಯೋಗದ ಮಾರ್ಗಸೂಚಿಗೆ ಸಂಪೂರ್ಣವಾಗಿ ತದ್ವಿರುದ್ಧವಾಗಿದೆ ಎಂದು ದೂರಿದರು.

ನಿನ್ನೆಯ ದಿನ ರಾಮನಗರದ ಛತ್ರದಲ್ಲಿ ಎಸ್‌ಐಆರ್ ಜಾತ್ರೆ ಮಾಡುತ್ತಿರುವ ದೃಶ್ಯಗಳನ್ನು ನಾನು ಮಾಧ್ಯಮಗಳಿಗೆ ಬಿಡುಗಡೆ ಮಾಡಿದ್ದೆ. ಇವತ್ತು ಯಶವಂತಪುರ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಕ್ರಮಗಳನ್ನು ಮಾಧ್ಯಮಗಳ ಮುಂದೆ ಇಡುತ್ತಿದ್ದೇನೆ. ಸ್ವತಃ ಕ್ಷೇತ್ರದ ಶಾಸಕರ ಫೋಟೋಗಳನ್ನು ಮುಂದಿಟ್ಟುಕೊಂಡು ಎಸ್‌ಐಆರ್ ಮಾಡಲಾಗುತ್ತಿದೆ. ಇದು ಯಾವ ಸೀಮೆಯ ಎಸ್‌ಐಆರ್ ಎಂದು ಕೇಂದ್ರ ಸಚಿವರು ತೀಕ್ಷ್ಣವಾಗಿ ಪ್ರಶ್ನಿಸಿದರು.

ಜೆಡಿಎಸ್, ಕಾಂಗ್ರೆಸ್ ಸಮ್ಮಿಶ್ರ ಸರ್ಕಾರ ಇದ್ದಾಗ ಅಲ್ಲಿನ ಶಾಸಕರು ರಾತ್ರೋರಾತ್ರಿ ಚೆನ್ನೈಗೆ ಕದ್ದು ಹೋಗಿ ತಮ್ಮ ಕ್ಷೇತ್ರ ಅಭಿವೃದ್ಧಿ ಆಗಬೇಕು ಎಂದು ಹೇಳಿ ಬಿಜೆಪಿ ಸೇರಿಕೊಂಡರು. ಅಲ್ಲಿ ಮೂರು ವರ್ಷ ಸಚಿವರಾಗಿ ಅಧಿಕಾರ ಅನುಭವಿಸಿದ ಮೇಲೆ ಬಿಜೆಪಿಯನ್ನು ಬಿಟ್ಟು ಕಾಂಗ್ರೆಸ್ ಕಡೆ ವಾಲಿದ್ದಾರೆ. ಇದು ಯಾವ ರೀತಿಯ ಡೆವಲಪ್‌ಮೆಂಟ್ ರಾಜಕೀಯವೋ ನನಗೆ ಗೊತ್ತಿಲ್ಲ. ಪಾಪ.. ಅವರು ಬಹಳ ಚೆನ್ನಾಗಿ ಮಾತನಾಡುತ್ತಾರೆ ಎಂದು ಟೀಕಿಸಿದರು.

ಈಗ ಯಶವಂತಪುರದಲ್ಲಿ ಶಾಸಕರ ಪುಸ್ತಕಗಳು, ಅವರೇ ಕೊಟ್ಟ ಮತದಾರರ ಪಟ್ಟಿಯನ್ನು ಇಟ್ಟುಕೊಂಡು ಅಧಿಕಾರಿಗಳು ಎಸ್‌ಐಆರ್ ಮಾಡುತ್ತಿದ್ದಾರೆ. ಈ ಸರ್ಕಾರ ಎಲ್ಲಾ ಅಧಿಕಾರಿಗಳಿಗೆ ಹೀಗೆಯೇ ಎಸ್‌ಐಆರ್ ಮಾಡಬೇಕು ಎಂದು ತಯಾರು ಮಾಡಿ ಕಳಿಸಿದ್ದಾರೆ. ಇವತ್ತು ಯಶವಂತಪುರ ಕ್ಷೇತ್ರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ನಿಯಮಗಳಿಗೆ ಶುದ್ಧವಾಗಿ ನಡೆಸುತ್ತಿದ್ದ ಅಧಿಕಾರಿಯನ್ನು ನಮ್ಮ ಕಾರ್ಯಕರ್ತರು ರೆಡ್ ಹ್ಯಾಂಡ್ ಆಗಿ ಇಳಿಸಿಕೊಂಡಿದ್ದಾರೆ. ಆ ಅಧಿಕಾರಿ ನಮ್ಮ ಕಾರ್ಯಕರ್ತರಲ್ಲಿ ಸಾರಿ ಎಂದು ಕೇಳುತ್ತಾರೆ. ಆಮೇಲೆ ಇನ್ನೊಬ್ಬ ಅಧಿಕಾರಿ ಬಂದು ವಿಡಿಯೋ ಮಾಡಬೇಡಿ ಎಂದು ಹೇಳುತ್ತಾರೆ ಎಂದು ಹರಿಹಾಯ್ದರು.

ಮತದಾರರ ಹುಂಡಿಯನ್ನೇ ಕಳ್ಳತನ ಮಾಡಲು ಹೊರಟಿದ್ದಾರೆ: ಮುಖ್ಯಮಂತ್ರಿಗಳು ಮಹಾನ್ ಎನ್ನುವಂತೆ ಭಾಷಣ ಬಿಗಿಯುತ್ತಾರೆ. ಪಾಕಿಸ್ತಾನದ ಬಗ್ಗೆ ಮಾತನಾಡುತ್ತಾರೆ. ಹುಂಡಿ ಕಳುವಿನ ಬಗ್ಗೆ ಮಾತಾಡುತ್ತಾರೆ. ಆದರೆ, ಇವರೇ ಮಾಡುತ್ತಿರುವ ಮತದಾರರ ಪಟ್ಟಿಯ ಕಳುವಿನ ಬಗ್ಗೆ ಜಾಣಮೌನ ವಹಿಸುತ್ತಾರೆ. ಇವರು ನೇರವಾಗಿ ಮತದಾರರ ಹುಂಡಿಯನ್ನೇ ಕಳ್ಳತನ ಮಾಡಲು ಹೊರಟಿದ್ದಾರೆ. ಇದಕ್ಕೆ ಏನೆಂದು ಹೇಳಬೇಕು ಎಂದು ಕೇಳಿದರು.

ಒಂದು ಕಡೆ ಸಂವಿಧಾನ ಪುಸ್ತಕ ತೆಗೆದುಕೊಂಡು ದೊಡ್ಡ ದೊಡ್ಡ ಭಾಷಣ ಮಾಡುತ್ತಾರೆ. ಇನ್ನೊಂದು ಕಡೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆಸುತ್ತಾರೆ. ಸಂವಿಧಾನವನ್ನೇ ಬುಡಮೇಲು ಮಾಡುವ ಜನ ಇವರು. ಅಂತಹ ಕೆಲಸಗಳಲ್ಲಿ ಇವರದ್ದು ಎತ್ತಿದ ಕೈ. ಕುಣಿಗಲ್, ಪಾವಗಡ, ಅರಕಲಗೂಡು, ಇಂಡಿ ಮುಂತಾದ ವಿಧಾನಸಭೆ ಕ್ಷೇತ್ರಗಳಲ್ಲಿಯೂ ಕಾಂಗ್ರೆಸ್ ಅಕ್ರಮಗಳನ್ನು ನಡೆಸುತ್ತಿದೆ. ಈ ಬಗ್ಗೆ ನಮ್ಮ ಪಕ್ಷದ ವತಿಯಿಂದ ಚುನಾವಣಾ ಆಯೋಗಕ್ಕೆ ದೂರು ನೀಡುತ್ತಿದ್ದೇವೆ. ಈ ಸರಕಾರಕ್ಕೆ ಮರ್ಯಾದೆ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

2014ರಲ್ಲಿ ನರೇಂದ್ರ ಮೋದಿ ಅವರ ಪ್ರಧಾನಿಗಳಾಗಿ ಸಂಸತ್ ಭವನ ಪ್ರವೇಶ ಮಾಡುವಾಗ ಕಟ್ಟಡದ ಮೆಟ್ಟಿಲುಗಳಿಗೆ ನಮಸ್ಕಾರ ಮಾಡಿದಂತೆ ಈ ರಾಜ್ಯದ ಮುಖ್ಯಮಂತ್ರಿಗಳು ಪ್ರಮಾಣವಚನ ಸ್ವೀಕರಿಸಿ ವಿಧಾನಸೌಧದ ಮೆಟ್ಟಲಿಗೆ ಸಾಷ್ಟಾಂಗ ನಮಸ್ಕಾರ ಮಾಡಿದ್ದನ್ನು ನೋಡಿ ಈ ವ್ಯಕ್ತಿಯಲ್ಲಿ ಏನೋ ಬದಲಾವಣೆ ಆಗಿರಬೇಕು ಎಂದುಕೊಂಡಿದ್ದೆ. ಆ

ದರೆ ಅದು ಕೇವಲ ನಾಟಕ ಎಂಬುದು ತಿಳಿಯಲು ಹೆಚ್ಚು ದಿನ ಬೇಕಾಗಿಲ್ಲ. ರಾಜ್ಯದಲ್ಲಿ ಈ ಎಸ್‌ಐಆರ್ ಹಳ್ಳಹಿಡಿದು ಹೋಗುತ್ತಿರುವುದಕ್ಕೆ ಈ ವ್ಯಕ್ತಿಗೆ ಮೂಲ ಸೂತ್ರಧಾರಿ ಎನ್ನುವುದು ಗೊತ್ತಾಯಿತು. ಇವರಿಗೆ ಮಾನ ಮರ್ಯಾದೆ ಇಲ್ಲ. ಬಹಳ ಬೇಸರದಿಂದ ಈ ಮಾತು ಹೇಳುತ್ತಿದ್ದೇನೆ ಎಂದು ಟೀಕಿಸಿದರು.

# ರಾಮ ಮಂದಿರ ದೇಣಿಗೆ ಕಳ್ಳತನದಲ್ಲಿ ಭಾಗಿಯಾದವರಿಗೆ ಕಠಿಣ ಶಿಕ್ಷೆ ವಿಧಿಸಬೇಕು

## ಆರ್‌ಎಸ್‌ಎಸ್ ಪ್ರಧಾನ ಕಾರ್ಯದರ್ಶಿ ಹೊಸಬಾಳೆ ಆಗ್ರಹ

**ನವದೆಹಲಿ,ಜು.3**-ಅಯೋಧ್ಯೆಯ ರಾಮ ಮಂದಿರದಲ್ಲಿ ನಡೆದ ದೇಣಿಗೆ ಕಳ್ಳತನ ಪ್ರಕರಣವು ಇಡೀ ಸಮಾಜದ ಭಾವನೆಗಳು ಮತ್ತು ನಂಬಿಕೆಗೆ ತೀವ್ರವಾದ ನೋವುಂಟು ಮಾಡಿದೆ ಎಂದು ಆರ್‌ಎಸ್‌ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಶುಕ್ರವಾರ ಹೇಳಿದ್ದಾರೆ. ಈ ಪ್ರಕರಣದಲ್ಲಿ ತನಿಖೆಯ ನಂತರ ತಪ್ಪಿತಸ್ಥರೆಂದು ಕಂಡುಬಂದ ಯಾರೇ ಆಗಿರಲಿ ಕಠಿಣ ಶಿಕ್ಷೆಗೆ ಗುರಿಯಾಗುವಂತೆ ನೋಡಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ. ಈ ದುರದೃಷ್ಟಕರ ಘಟನೆಯನ್ನು ದುರ್ಬಳಕೆ ಮಾಡಿಕೊಳ್ಳುವ ಮೂಲಕ ಹಿಂದೂ ವಿರೋಧಿ ಮತ್ತು ರಾಷ್ಟ್ರ ವಿರೋಧಿ ಶಕ್ತಿಗಳು ಹಿಂದೂ ಧರ್ಮಕ್ಕೆ ಅಪಚಾರ ಎಸಗಲು ಪ್ರಯತ್ನಿಸುತ್ತಿವೆ ಎಂದು ಹೊಸಬಾಳೆ ಅವರು ದೂರಿದ್ದಾರೆ. ಈ ಕಷ್ಟದ ಸಮಯದಲ್ಲಿ ಅಂತಹ ಪಿತೂರಿಗಳನ್ನು ತಡೆಯಲು ಅಗತ್ಯವಾದ ತಾಳ್ಮೆ ಮತ್ತು ಸಂಯಮವನ್ನು ಪ್ರದರ್ಶಿಸಬೇಕೆಂದು ಇಡೀ ಹಿಂದೂ ಸಮಾಜಕ್ಕೆ ಅವರು ಇಂದು ಕರೆ ನೀಡಿದ್ದಾರೆ.

ಅಯೋಧ್ಯೆಯ ಶ್ರೀ ರಾಮಲಲ್ಲಾ ದೇವಸ್ಥಾನದಲ್ಲಿ ಇರಿಸಲಾಗಿರುವ ಕಾಣಿಕೆ ಪೆಟ್ಟಿಗೆಗಳಲ್ಲಿ ಕಳ್ಳತನ ನಡೆದಿರುವುದು ದುರದೃಷ್ಟಕರ. ಈ ಘಟನೆಯು ಇಡೀ ಸಮಾಜ ಮತ್ತು ರಾಮ ಭಕ್ತರ ಭಾವನೆಗಳು ಮತ್ತು ನಂಬಿಕೆಯನ್ನು ತೀವ್ರವಾಗಿ ನೋಯಿಸಿದೆ ಎಂದು ಆರ್‌ಎಸ್‌ಎಸ್‌ನ ಸಹ ಸರಸಂಘಚಾಲಕರು ತಮ್ಮ ಎಕ್ಸ್ ಪೋಸ್ಟ್ ನಲ್ಲಿ ಹೇಳಿದ್ದಾರೆ. ಈ ಘಟನೆಯಿಂದ ನಾವೆಲ್ಲರೂ ತೀವ್ರ ನೋವು ಮತ್ತು ಕೋಪಗೊಂಡಿದ್ದೇವೆ ಎಂದು ಅವರು ಹೇಳಿದರು.

ರಾಷ್ಟ್ರೀಯ ಸ್ವಯಂಸೇವಕ ಸಂಘ ಸೇರಿದಂತೆ ಇಡೀ ಹಿಂದೂ ಸಮಾಜವು, ಟ್ರಸ್ಟ್ ನ ಈ ಘಟನೆಯನ್ನು ತೀವ್ರ ಖಂಡನೀಯ ಘಟನೆ ಎಂದು ಕರೆಯುತ್ತದೆ. ಅಷ್ಟೇ ಅಲ್ಲ ಇದು ಅಸಾಧಾರಣ ವಿಷಯವೆಂದು ಪರಿಗಣಿಸಿ ದೇವಾಲಯ ನಿರ್ವಹಣೆ ಮತ್ತು ಕಾರ್ಯಾಚರಣೆಗಳಲ್ಲಿನ ಎಲ್ಲಾ ನ್ಯೂನತೆಗಳನ್ನು ಸರಿಪಡಿಸಲು ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ನಿರೀಕ್ಷಿಸುವುದು ಸಹಜ ಎಂದು ಹೊಸಬಾಳೆ ಹೇಳಿದ್ದಾರೆ.

ತನಿಖೆಯ ನಂತರ ತಪ್ಪಿತಸ್ಥರು ಎಂದು ಕಂಡುಬಂದ ಯಾರಾದರೂ ಕಠಿಣ ಶಿಕ್ಷೆಯನ್ನು ಎದುರಿಸುವಂತೆ ನೋಡಿಕೊಳ್ಳುವುದು ಅತ್ಯಗತ್ಯ ಎಂದು ಅವರು ಹೇಳಿದರು. ಪ್ರಸ್ತುತ ಗೊಂದಲ ಮತ್ತು ಅನಿಶ್ಚಿತತೆಯ ಸ್ಥಿತಿ ಕೊನೆಗೊಳ್ಳಬೇಕು ಎಂದು ಆರ್‌ಎಸ್‌ಎಸ್ ಪ್ರಧಾನ ಕಾರ್ಯದರ್ಶಿಗಳು ಇದೇ ವೇಳೆ ಒತ್ತಿ ಹೇಳಿದರು.

ಈ ನಿಟ್ಟಿನಲ್ಲಿ, ದೇವಾಲಯ ನಿರ್ವಹಣೆ ಮತ್ತು ಸರ್ಕಾರ ನೇಮಿಸಿದ ಎಸ್‌ಐಟಿ ಅಗತ್ಯ ಇರುವ ಎಲ್ಲ ಉಪಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ನಾವು ನಿರೀಕ್ಷಿಸುತ್ತೇವೆ ಎಂದು ಅವರು ಇದೇ ವೇಳೆ ಅವರು ತಿಳಿಸಿದರು. ಶ್ರೀ ರಾಮ ಜನ್ಮಭೂಮಿಯಲ್ಲಿ ನಿರ್ಮಿಸಲಾದ ಭವ್ಯ ದೇವಾಲಯವು ತಲೆಮಾರುಗಳ ಹೋರಾಟ ಮತ್ತು ಕೋಟ್ಯಂತರ ರಾಮಭಕ್ತರ (ಭಕ್ತರು) ಸಮರ್ಪಣೆ, ತ್ಯಾಗ ಮತ್ತು ಹುತಾತ್ಮತೆಯಿಂದಾಗಿ ಇಡೀ ಹಿಂದೂ ಸಮಾಜಕ್ಕೆ ಭಕ್ತಿ, ನಂಬಿಕೆ ಮತ್ತು ಶ್ರದ್ಧಾ ಕೇಂದ್ರವಾಗಿದೆ ಎಂದು ಹೊಸಬಾಳೆ ಹೇಳಿದರು.

ಸರಿಯಾದ ಹಣಕಾಸು ನಿರ್ವಹಣೆ, ದೋಷರಹಿತ ಮತ್ತು ಪಾರದರ್ಶಕ ಕಾರ್ಯಾಚರಣಾ ವ್ಯವಸ್ಥೆಗಳು ಮತ್ತು ಶುದ್ಧತೆ, ಪಾವಿತ್ರ್ಯ ಮತ್ತು ನಿಜವಾದ ಧಾರ್ಮಿಕತೆಯಿಂದ ತುಂಬಿದ ವಾತಾವರಣದ ಮೂಲಕ, ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಹಿಂದೂ ಸಮಾಜದ ನಂಬಿಕೆ ಮತ್ತು ವಿಶ್ವಾಸವನ್ನು ಬಲಪಡಿಸುವುದನ್ನು ಮುಂದುವರಿಸುತ್ತದೆ ಎಂದು ನಮಗೆ ವಿಶ್ವಾಸವಿದೆ ಎಂದು ಅವರು ಇದೇ ವೇಳೆ ಭರವಸೆಯನ್ನು ವ್ಯಕ್ತಪಡಿಸಿದರು.

# ವಚನ ಸಾಹಿತ್ಯದ ವಚನಗುಮ್ಮಟ ಫ.ಗು.ಹಳಕಟ್ಟಿ: ಅರವಿಂದ್ ಗಂಗೋರ



**ಕೊಲ್ಹಾರ,ಜು.3**-ವಚನ ಸಾಹಿತ್ಯದ ಉಳಿವು, ಸಂರಕ್ಷಣೆ ಮತ್ತು ಪ್ರಸಾರಕ್ಕೆ ಡಾ. ಫ.ಗು. ಹಳಕಟ್ಟಿ ಅವರ ಕೊಡುಗೆ ಅಪಾರವಾಗಿದ್ದು, ಅವರು ಸಮಾಜದ ವಚನಗುಮ್ಮಟ ಎಂದು ಅರವಿಂದ್ ಗಂಗೋರ ಬಣ್ಣಿಸಿದರು.

ಸರಕಾರಿ ಕರ್ನಾಟಕ ಪಬ್ಲಿಕ್ ಶಾಲೆ ಕೂಡಗಿಯಲ್ಲಿ ಗುರುವಾರ ಆಯೋಜಿಸಿದ್ದ ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ಜನ್ಮದಿನ ಹಾಗೂ ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಮನೆ, ಮಠ ಹಾಗೂ ಜಗುಲಿಗಳಲ್ಲಿದ್ದ ತಾಡೋಲೆಗಳನ್ನು ಹುಡುಕಿ ಸಂಗ್ರಹಿಸಿ, ಅವುಗಳ ಅರ್ಥವನ್ನು ಬಿಡಿಸಿ ವಚನ ಸಾಹಿತ್ಯವನ್ನು ಜನಸಾಮಾನ್ಯರಿಗೆ ತಲುಪಿಸುವ ಮಹತ್ತರ ಕಾರ್ಯವನ್ನು ಹಳಕಟ್ಟಿಯವರು ಕೈಗೊಂಡರು. ಈ ಉದ್ದೇಶಕ್ಕಾಗಿ 1925ರಲ್ಲಿ ಹಿತಚಿಂತಕ ಮುದ್ರಣಾಲಯ ಸ್ಥಾಪಿಸಿದ್ದು,

ಮುದ್ರಣ ಯಂತ್ರ ಖರೀದಿಸಲು ಆರ್ಥಿಕ ಸಂಕಷ್ಟ ಎದುರಾದಾಗ ತಮ್ಮ ಮನೆಯನ್ನು ಮಾರಾಟ ಮಾಡಿ ಬಾಡಿಗೆ ಮನೆಯಲ್ಲಿ ಜೀವನ ನಡೆಸಿದ ತ್ಯಾಗಮೂರ್ತಿ ಎಂದು ಸ್ಮರಿಸಿದರು.

ಸ್ವತಃ ಅಚ್ಚು ಜೋಡಿಸಿ, ಪೆಡಲ್ ತುಳಿದು ವಚನಗಳನ್ನು ಮುದ್ರಿಸಿ ಪ್ರಕಟಿಸಿದ ಅವರು, ಸುಮಾರು 250 ವಚನಕಾರರ ವಚನಗಳನ್ನು ಬೆಳಕಿಗೆ ತಂದರು. ಅವರ ಈ ಕಾರ್ಯಕ್ಕೂ ಮುನ್ನ ಕೇವಲ 50 ವಚನಕಾರರ ವಚನಗಳು ಮಾತ್ರ ಲಭ್ಯವಿದ್ದವು. ವಚನ ಸಾಹಿತ್ಯಕ್ಕೆ ಅವರು ನೀಡಿದ ಕೊಡುಗೆ ಅಮೂಲ್ಯ ಎಂದು ಹೇಳಿದರು.

1880ರ ಜುಲೈ 2ರಂದು ಜನಿಸಿದ ಹಳಕಟ್ಟಿಯವರು ಬದುಕಿನುದ್ದಕ್ಕೂ ಸಾಮಾಜಿಕ, ಶೈಕ್ಷಣಿಕ, ವಚನ ಸಾಹಿತ್ಯ ಹಾಗೂ ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ಅಪಾರ ಸೇವೆ ಸಲ್ಲಿಸಿದ್ದು, ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿಜಯಪುರ ನಗರಸಭೆ ಅಧ್ಯಕ್ಷರಾಗಿದ್ದ ವೇಳೆ ಹಳಕಟ್ಟಿಯವರು ಸರ್ ಎಂ. ವಿಶ್ವೇಶ್ವರಯ್ಯ ಅವರ ತಾಂತ್ರಿಕ ಸಲಹೆಯೊಂದಿಗೆ ಭೂತನಾಳ ಕೆರೆಯನ್ನು ನಿರ್ಮಿಸಿ ನಗರದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿದ ದೂರದೃಷ್ಟಿಯ ನಾಯಕ ಎಂದು ಶಾಲೆಯ ಮುಖ್ಯ ಶಿಕ್ಷಕಿ ಪ್ರತಿಭಾ ತೊರವಿ ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಅರವಿಂದ್ ಗಂಗೋರ, ಎ ಎಸ್ ಹೊರ್ತಿ, ಸುಮಾ ಗುಮಾಸ್ತೆ,ಸೈಲಜಾ ಜೋಶಿ,ಎನ್ ಎ ಶೇಖ್,ರಜೀಯಾ ಬೇಗಂ ದಳವಾಯಿ,ಗೀತಾ ಮಲ್ನಾಡ್ ಮೇಡಂ,ಅತಿಥಿ ಶಿಕ್ಷಕರು, ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು

# ರಾಮನಗರದ ಭೀಕರ ದುರಂತದಲ್ಲಿ ಶಹಾಪುರ ಮೂಲದ ಕಾರ್ಮಿಕ ಬಲಿ; ನಡಹಳ್ಳಿ ತಾಂಡದಲ್ಲಿ ಮಡುಗಟ್ಟಿದ ಶೋಕ

■ ಕನ್ನಡ ಮಾತೃ ಭೂಮಿ ವಾರ್ತೆ



**ಶಹಾಪುರ,**ರಾಮನಗರ ಜಿಲ್ಲೆಯ ಕಾವೇರಿ ಕ್ರಷರ್ ಕಂಪನಿಗೆ ಸೇರಿದ ಪ್ರದೇಶದಲ್ಲಿ ಇಂದು ಬೆಳಿಗ್ಗೆ ಸುಮಾರು 7:30 ಗಂಟೆಗೆ ಸಂಭವಿಸಿದ ಭೀಕರ ದುರ್ಘಟನೆಯಲ್ಲಿ ಏಳು ಮಂದಿ ಕಾರ್ಮಿಕರು ಮೃತಪಟ್ಟಿರುವ ಘಟನೆ ರಾಜ್ಯಾದ್ಯಂತ ತೀವ್ರ ದುಃಖಕ್ಕೆ ಕಾರಣವಾಗಿದೆ.

ಮೃತರಲ್ಲಿ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ನಡಹಳ್ಳಿ ತಾಂಡಾ (ದೇಸುನಾಯಕ ತಾಂಡಾ) ನಿವಾಸಿಯಾದ ರಾಮು ನಾಯಕ (49) ಅವರೂ ಸೇರಿರುವುದು ಗ್ರಾಮಸ್ಥರಲ್ಲಿ ಆಘಾತ ಮತ್ತು ಶೋಕವನ್ನುಂಟು ಮಾಡಿದೆ.

ರಾಮು ನಾಯಕ ಅವರು ಸಾಜು ನಾಯಕ ಅವರ ಪುತ್ರರಾಗಿದ್ದು, ಜೀವನೋಪಾಯಕ್ಕಾಗಿ ಸುಮಾರು 15 ವರ್ಷಗಳ ಹಿಂದೆ ರಾಮನಗರಕ್ಕೆ ತೆರಳಿ ಕಾರ್ಮಿಕರಾಗಿ ದುಡಿಯುತ್ತಿದ್ದರು.

ಸ್ವಗ್ರಾಮದಲ್ಲಿ ಜೀವನ ಸಾಗಿಸಲು ಸಾಕಷ್ಟು ಆರ್ಥಿಕ ಮೂಲಗಳಿಲ್ಲದ ಕಾರಣ ಉದ್ಯೋಗದ ಹುಡುಕಾಟದಲ್ಲಿ ಊರು ಬಿಟ್ಟು ಹೋಗಿದ್ದ ಅವರು, ತಮ್ಮ ಶ್ರಮದಿಂದ ಕುಟುಂಬವನ್ನು ಸಾಕುತ್ತಿದ್ದರು.

ಮೃತ ರಾಮು ನಾಯಕ ಅವರು ಪತ್ನಿ ಸಕ್ಕುಭಾಯಿ ಸೇರಿದಂತೆ ನಾಲ್ವರು ಮಕ್ಕಳಾದ ಶ್ರೀನಿವಾಸ (26), ರೇಷ್ಮಾ (24), ಮನೋಜ್ (22) ಹಾಗೂ ಯಶೋಧಾ (21) ಅವರನ್ನು ಅಗಲಿದ್ದಾರೆ. ಕುಟುಂಬದ ಸಂಪೂರ್ಣ ಜವಾಬ್ದಾರಿಯನ್ನು ಹೊತ್ತಿದ್ದ ಅವರ ಅಕಾಲಿಕ ನಿಧನದಿಂದ ಪತ್ನಿ ಹಾಗೂ ಮಕ್ಕಳ ಭವಿಷ್ಯದ ಬಗ್ಗೆ ಆತಂಕ ವ್ಯಕ್ತವಾಗುತ್ತಿದೆ.

ಅವರ ಹಿರಿಯ ಸಹೋದರ ಲಾಲೂ ನಾಯಕ (55) ಅವರು ದೇಸುನಾಯಕ ತಾಂಡದಲ್ಲೇ ವಾಸವಾಗಿದ್ದು, ಈ ದುರ್ಘಟನೆಯ ಸುದ್ದಿ ತಿಳಿದ ತಕ್ಷಣ ಕುಟುಂಬಸ್ಥರು ಹಾಗೂ ಬಂಧುಗಳು ಕಂಬನಿ ಮಿಡಿದಿದ್ದಾರೆ.

ರಾಮು ನಾಯಕ ಅವರು ಅನಕ್ಷರಸ್ಥರಾಗಿದ್ದರೂ, ದುಡಿಮೆಯನ್ನೇ ಬದುಕಿನ ಆಧಾರವನ್ನಾಗಿ ಮಾಡಿಕೊಂಡು ಕುಟುಂಬದ ಸುಖಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿದ್ದರು ಎಂದು ಗ್ರಾಮಸ್ಥರು ಕಣ್ಣೀರಿನಿಂದ ಸ್ಮರಿಸುತ್ತಿದ್ದಾರೆ.

ಸ್ವಗ್ರಾಮದಲ್ಲಿ ಅವರಿಗೆ ಕೇವಲ 30 ಗುಂಟೆ ಜಮೀನು ಮಾತ್ರ ಇದ್ದು, ಅದರಿಂದ ಜೀವನ ನಿರ್ವಹಣೆ ಸಾಧ್ಯವಾಗದ ಕಾರಣ ಹೊರ ಜಿಲ್ಲೆಗೆ ತೆರಳಿ ದುಡಿಯುತ್ತಿದ್ದರು. ವರ್ಷದಲ್ಲಿ ಹಬ್ಬ-ಹರಿದಿನಗಳು ಅಥವಾ ವಿಶೇಷ ಸಂದರ್ಭಗಳಲ್ಲಿ ಮಾತ್ರ ಊರಿಗೆ ಬಂದು ಬಂಧು-ಬಳಗವನ್ನು ಭೇಟಿಯಾಗಿ ಮತ್ತೆ ಕೆಲಸಕ್ಕೆ ತೆರಳುತ್ತಿದ್ದರು ಎನ್ನಲಾಗಿದೆ.

ಸದ್ಯ ಮೃತದೇಹವನ್ನು ಸ್ವಗ್ರಾಮಕ್ಕೆ ಕರೆತರಲು ಕುಟುಂಬದ ಸಂಬಂಧಿಕರಾದ ಚಂದ್ರಶೇಖರ್ ಅವರ ನೇತೃತ್ವದಲ್ಲಿ ಬಂಧುಗಳು ರಾಮನಗರಕ್ಕೆ ತೆರಳಿದ್ದಾರೆ. ಮೃತದೇಹ ಆಗಮಿಸುವ ನಿರೀಕ್ಷೆಯಲ್ಲಿ ನಡಹಳ್ಳಿ ತಾಂಡದಲ್ಲಿ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಕಣ್ಣೀರಿನಲ್ಲೇ ಕಾಯುತ್ತಿದ್ದಾರೆ.

ಈ ದಾರುಣ ಘಟನೆಯಿಂದ ನಡಹಳ್ಳಿ ತಾಂಡಾ ಸೇರಿದಂತೆ ಶಹಾಪುರ ತಾಲೂಕಿನಾದ್ಯಂತ ತೀವ್ರ ಶೋಕದ ವಾತಾವರಣ ನಿರ್ಮಾಣವಾಗಿದೆ. ಗ್ರಾಮಸ್ಥರು,

ಬಂಧುಗಳು ಹಾಗೂ ಪರಿಚಿತರು ರಾಮು ನಾಯಕ ಅವರ ಅಕಾಲಿಕ ನಿಧನಕ್ಕೆ ಸಂತಾಪ ಸೂಚಿಸುತ್ತಿದ್ದು,

ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಹಾಗೂ ದುಃಖಿತ ಕುಟುಂಬಕ್ಕೆ ಈ ನೋವನ್ನು ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತಿದ್ದಾರೆ.

ರಾಮನಗರದಲ್ಲಿ ನಡೆದ ಈ ದುರಂತದ ಕುರಿತು ಸರ್ಕಾರ ಸಮಗ್ರ ತನಿಖೆ ನಡೆಸಿ, ಮೃತರ ಕುಟುಂಬಗಳಿಗೆ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಕೆ.ಎಸ್.ಈಶ್ವರಪ್ಪ ಕುಟುಂಬಸ್ಥರಿಂದ ಅಕ್ರಮ ಆಸ್ತಿಗಳಿಕೆ ಆರೋಪ

## ತನಿಖೆಗೆ ಆದೇಶಿಸಿದ್ದ ವಿಶೇಷ ನ್ಯಾಯಾಲಯದ ಆದೇಶ ಎತ್ತಿಹಿಡಿದ ಹೈಕೋರ್ಟ್



**ಬೆಂಗಳೂರು,ಜು.3**-ಆದಾಯಕ್ಕಿಂತ ಹೆಚ್ಚು ಪ್ರಮಾಣದಲ್ಲಿ ಅಕ್ರಮ ಆಸ್ತಿ ಗಳಿಗೆ ಆರೋಪ ಸಂಬಂಧ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಮತ್ತವರ ಕುಟುಂಬ ಸದಸ್ಯರ ವಿರುದ್ಧ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚನೆ ನೀಡಿದ್ದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದಿರುವ ಹೈಕೋರ್ಟ್, ಈ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದೆ.

ವಿಶೇಷ ನ್ಯಾಯಾಲಯದ ಆದೇಶ ಪ್ರಶ್ನಿಸಿ ಕೆ.ಎಸ್.ಈಶ್ವರಪ್ಪ, ಮತ್ತವರ ಮಗ ಕೆ.ಇ.ಕಾಂತೇಶ್ ಮತ್ತು ಸೊಸೆ ಶಾಲಿನಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ, ಈ ಆದೇಶ ನೀಡಿದೆ. ಆದೇಶದ ವಿಸ್ತೃತವಾದ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಾಗಿದೆ.

ಪ್ರಕರಣಕ್ಕೆ ಸಂಬಂಧ ದೂರು ದಾಖಲಾಗಿ 12 ವರ್ಷಗಳು ಕಳೆಯುತ್ತಿದೆ. ದೂರು ದಾಖಲಾದ ಸಂದರ್ಭದಲ್ಲಿ ಬಿಎನ್‌ಎಸ್‌ಎಸ್ ಜಾರಿಯಲ್ಲಿರಲಿಲ್ಲ. ಹೀಗಾಗಿ ಅಪರಾಧ ಪ್ರಕ್ರಿಯೆ ಸಂಹಿತೆ(ಸಿಆರ್‌ಪಿಸಿ) ಅಡಿ ತನಿಖೆ ನಡೆಸಲು ನಿರ್ದೇಶನ ನೀಡಿರುವುದರಲ್ಲಿ ಯಾವುದೇ ಕಾನೂನು ಪ್ರಕ್ರಿಯೆ ಉಲ್ಲಂಘನೆಯಿಲ್ಲ ಎಂದು ತಿಳಿಸಿದೆ.

ಅಲ್ಲದೇ, ತನಿಖೆಗೆ ಸಹಕರಿಸಿದರೆ ಬಂಧಿಸುವುದಿಲ್ಲ ಎಂಬುದಾಗಿ ಲೋಕಾಯುಕ್ತ ವಕೀಲರು ವಾಗ್ದಾನವನ್ನು ದಾಖಲಿಸಿದ ನ್ಯಾಯಪೀಠ, ಅರ್ಜಿದಾರರು ತನಿಖೆ ಸಹಕರಿಸಿದರೆ ಬಂಧಿಸಬಾರದು ಎಂದು ಸೂಚನೆ ನೀಡಿದೆ. ಇದಕ್ಕೂ ಮುನ್ನ ನಡೆದ ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲ ಅಶೋಕ್ ಹಾರನಹಳ್ಳಿ, ಪ್ರಸ್ತುತ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ(ಬಿಎನ್‌ಎಸ್‌ಎಸ್) ಜಾರಿಯಲ್ಲಿದೆ. ಖಾಸಗಿ ದೂರು ದಾಖಲಾದ ಬಳಿಕ ಪ್ರತಿವಾದಿ(ಆರೋಪಿಗಳನ್ನು) ವಿಚಾರಣೆಗೊಳಪಡಿಸಿ ತನಿಖೆಗೆ ಆದೇಶಿಸಬೇಕು ಎಂಬ ನಿಯಮವಿದೆ. ಆದರೆ, ಸಿಆರ್‌ಪಿಸಿ ಅಡಿ ತನಿಖೆಗೆ ಆದೇಶಿಸಲಾಗಿದೆ. ಇದು ಸುಪ್ರೀಂಕೋರ್ಟ್ ಆದೇಶಕ್ಕೆ ವಿರುದ್ಧವಾಗಿದೆ. ಅಲ್ಲದೆ, ಖಾಸಗಿ ದೂರಿನಲ್ಲಿ ಯಾವ ಸಂದರ್ಭದಲ್ಲಿ ಅಕ್ರಮವಾಗಿ ಹಣ ಗಳಿಕೆ ಮಾಡಿದ್ದಾರೆ(ಚೆಕ್ ಲಿಸ್ಟ್) ಎಂಬುದರ ವಿವರ ನೀಡಿಲ್ಲ. ಆದ್ದರಿಂದ ಖಾಸಗಿ ದೂರು ಮತ್ತು ತನಿಖೆಗೆ ಆದೇಶಿಸಿರುವ ಕ್ರಮವನ್ನು ರದ್ದುಪಡಿಸಬೇಕು ಎಂದು ಕೋರಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಲೋಕಾಯುಕ್ತ ಪರ ವಕೀಲ ವೆಂಕಟೇಶ್ ಅರಬಟ್ಟಿ, ವಿಚಾರಣಾ ನ್ಯಾಯಾಲಯ ತನಿಖೆ ಆದೇಶಿಸಿರುವ ಆದೇಶದಲ್ಲಿ ಯಾವುದೇ ಕಾನೂನು ದೋಷಗಳಿಲ್ಲ. ಆದ್ದರಿಂದ ಅರ್ಜಿಯನ್ನು ವಜಾಗೊಳಿಸಬೇಕು ಎಂದು ಕೋರಿದರು. ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ಅರ್ಜಿಯನ್ನು ವಜಾಗೊಳಿಸಿರುವುದಾಗಿ ತಿಳಿಸಿತು.

ಪ್ರಕರಣದ ಹಿನ್ನೆಲೆ: ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ 2006ರಲ್ಲಿ ರಾಜ್ಯ ಜಲಸಂಪನ್ಮೂಲ ಸಚಿವರಾದ ಬಳಿಕ ಶಿವಮೊಗ್ಗದಲ್ಲಿ ತಮ್ಮ ಪುತ್ರ ಕೆ. ಇ. ಕಾಂತೇಶ್ ಮತ್ತು ಸೊಸೆ ಶಾಲಿನಿ ಅವರು ಹೆಸರಿನಲ್ಲಿ ಕೋಟ್ಯಂತರ ಬೆಲೆ ಬಾಳುವ ಚರ ಮತ್ತು ಸ್ಥಿರಾಸ್ತಿ ಖರೀದಿಸಿದ್ದಾರೆ.

ಅಲ್ಲದೇ, ಈ ಮೂವರು ಜಂಟಿಯಾಗಿ ಹಲವು ಶೈಕ್ಷಣಿಕ ಸಂಸ್ಥೆಗಳು, ಕೈಗಾರಿಕೆಗಳು, ಆಟೋ ಮೊಬೈಲ್ ಶೋರೂಂಗಳನ್ನು ನಡೆಸುತ್ತಿದ್ದಾರೆ.

ಈಶ್ವರಪ್ಪ ಶಾಸಕರಾಗುವ ಮುನ್ನ 2006ರಲ್ಲಿ ಸಚಿವರಾದ ನಂತರ ಕೇವಲ ಮೂರೂವರೆ ವರ್ಷದಲ್ಲಿ ಶೇ. 100ರಷ್ಟು ಅಧಿಕ ಆಸ್ತಿ ಸಂಪಾದನೆ ಮಾಡಿದ್ದಾರೆ. ಆದ್ದರಿಂದ, ಭ್ರಷ್ಟಾಚಾರ ನಿಗ್ರಹ ಕಾಯಿದೆ ಅಡಿ ಭ್ರಷ್ಟಚಾರ, ಅಕ್ರಮ ಆಸ್ತಿ ಸಂಪಾದನೆ ಮತ್ತು ಅಧಿಕಾರ ದುರುಪಯೋಗ ಆರೋಪದ ಮೇಲೆ ತನಿಖೆ ನಡೆಸಲು ಲೋಕಾಯುಕ್ತ ಪೊಲೀಸರಿಗೆ ಆದೇಶಿಸುವಂತೆ ಕೋರಿ ವಕೀಲ ಬಿ. ವಿನೋದ್ 2021ರಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಖಾಸಗಿ ದೂರು ಸಲ್ಲಿಸಿದ್ದರು.

ದೂರಿನ ವಿಚಾರಣೆ ನಡೆಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ದೂರು ಆಧರಿಸಿ ಭ್ರಷ್ಟಾಚಾರ ನಿಗ್ರಹ ಕಾಯಿದೆ-1988ರ ಸೆಕ್ಷನ್ 13(1)(ಡಿ) (ಅಕ್ರಮ ಸಂಪಾದನೆಗೆ ಅಧಿಕಾರ ದುರ್ಬಳಕೆ) ಹಾಗೂ 13(1)(ಇ) ಮತ್ತು ಭಾರತೀಯ ದಂಡ ಸಂಹಿತೆ ಸೆಕ್ಷನ್ 420ರ (ವಂಚನೆ), ಸೆಕ್ಷನ್ 120-ಬಿ (ಅಪರಾಧಿಕ ಒಳಸಂಚು) ಅಡಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಶಿವಮೊಗ್ಗ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿಗೆ 2025ರ ಏಪ್ರಿಲ್ 5ರಂದು ಆದೇಶಿಸಿತ್ತು.

ಅದರಂತೆ ಲೋಕಾಯುಕ್ತ ಪೊಲೀಸರು 2025ರ ಜುಲೈ 2ರಂದು ಈಶ್ವರಪ್ಪ, ಕಾಂತೇಶ್ ಮತ್ತು ಶಾಲಿನಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಇದರಿಂದ ತಮ್ಮ ವಿರುದ್ಧದ ಎಫ್‌ಐಆರ್ ಮತ್ತು ವಿಶೇಷ ನ್ಯಾಯಾಲಯದ ವಿಚಾರಣೆ ರದ್ದು ಕೋರಿ ಈಶ್ವರಪ್ಪ ಮತ್ತವರ ಕುಟುಂಬ ಸದಸ್ಯರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ...ಮೊದಲನೇ ಪುಟದಿಂದ

## ರೈತರ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರ ಪೂರೈಕೆ ಮಾಡಿ-ಡಾ.ಶರಣಪ್ರಕಾಶ್

ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು.ಕಳ್ಳಸಂತೆಯಲ್ಲಿ ಮಾರಾಟ ಮಾಡಿದಲ್ಲಿ ಅಂತಹ ಅಂಗಡಿಗಳನ್ನು ಬ್ಲಾಕ್ ಲಿಸ್ಟ್ ಪಟ್ಟಿಗೆ ಸೇರಿಸಬೇಕು.

ಜಿಲ್ಲೆಯಲ್ಲಿ ಇನ್ನೂಬ ಬಿತ್ತನೆಗೆ ಸಮಯವಿದ್ದು, ಬಿತ್ತನೆ ಬೀಜಗಳ ವಿತರಣೆ ಅಗತ್ಯ ಕ್ರಮವಹಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಜಿಲ್ಲೆಯಲ್ಲಿ ರೈತರಿಂದ ಬೆಳೆ ವಿಮೆಗೆ ಮಾಡಿಸಲು ಅಗತ್ಯ ಪ್ರಚಾರ ಕೈಗೊಳ್ಳಬೇಕು. ತಾಲೂಕು ಮಟ್ಟದ ಅಧಿಕಾರಿಗಳು ರೈತರಿಗೆ ಈ ಬಗ್ಗೆ ಮಾಹಿತಿ ನೀಡಬೇಕು. 75 ಸಾವಿರ ರೈತರ ಪೈಕಿ 75 ಸಾವಿರ ರೈತರು ಬೆಳೆ ವಿಮೆಯಲ್ಲಿ ನೋಂದಣಿಯಾಗಬೇಕು. ಜಿಲ್ಲೆಯಲ್ಲಿ 2026ನೇ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಜಿಲ್ಲೆಯ 83 ಪಂಚಾಯತಗಳ ಪೈಕಿ 202 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಿಸಬಹುದಾಗಿದೆ ಎಂದು ಅಂದಾಜಿಸಲಾಗಿದೆ. ಜಿಲ್ಲೆಯ ಪ್ರತಿಯೊಂದು ತಾಲೂಕಿನಲ್ಲಿ ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಯ ಸಭೆ ಮಾಡಿ, ನೀರಿನ ಸಮಸ್ಯೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮಳೆ ಆಗದೇ ಇರುವ ಕಾರಣಕ್ಕೆ ಖಾಸಗಿ ಬೋರವೆಲ್ ನಿಂದ ಕುಡಿಯುವ ನೀರಿನ ಕಾಮಗಾರಿಯನ್ನು ಮುಂದುವರಿಸಬೇಕು. ಕಾಲಕಾಲಕ್ಕೆ ಅನುದಾನವನ್ನು ಸಂಬಂಧಿಸಿದ ಮಾಲೀಕರಿಗೆ ಪಾವತಿಸಬೇಕು. ನಿರ್ಲಕ್ಷ್ಯ ತೋರಿ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು. ಜಿಲ್ಲೆಯ 38 ಕೆರೆಯಲ್ಲಿ ಶೇ.76 ರಿಂದ ಶೇ.100ರಷ್ಟು ಕೆರೆಗಳನ್ನು ಮಾತ್ರ ತುಂಬಿಸಲಾಗಿದೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಕೆರೆಗಳನ್ನು ತುಂಬಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ನೀರಿನ ಸಮಸ್ಯೆ ಕುರಿತು ಜಿಲ್ಲೆಯಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿಲಾಗಿದೆ.ನೋಡಲ್ ಅಧಿಕಾರಿಗಳು ತಮ್ಮ ತಮ್ಮ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ನೀರು ಬಿಟ್ಟಾಗ ಶೇ.100ರಷ್ಟು ನೀರು ತುಂಬಲು ಬೇಕಾಗುವ ವ್ಯವಸ್ಥೆಗೆ ಸಂಬಂಧಿಸಿದ ಅಧಿಕಾರಿಗಳಿಂದ ಕೂಡಲೇ ವರದಿ ಸಲ್ಲಿಸಬೇಕು. ರಾಯಚೂರು ನಗರಕ್ಕೆ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತೆ ವಹಿಸಬೇಕು. ಕೃಷ್ಣ ನದಿಯಿಂದ ನೀರನ್ನು ಲಿಪ್ಟ್ ಮಾಡಿ, ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಕಾಲುವೆಗಳ ನಾಲೆಗಳನ್ನು ಸ್ವಚ್ಛಗೊಳಿಸಬೇಕು. ನರೇಗಾ ಯೋಜನೆಯಡಿ ಕಾಲುವೆ ಹಾಗೂ ಕೆರೆಗಳ ಹುಳ ತೆಗೆಯಲು ವ್ಯವಸ್ಥೆ ಮಾಡಬೇಕು.

ಜಿಲ್ಲೆಯಲ್ಲಿ 2026ನೇ ಸಾಲಿನಲ್ಲಿ ಒಟ್ಟು 3 ಮಾನವ ಜೀವಹಾನಿಯಾಗಿದ್ದು, ಎಲ್ಲರಿಗೂ ಪರಿಹಾರ ನೀಡಬೇಕು. ಜಾನುವಾರು ಹಾನಿಯಲ್ಲಿ ಸಣ್ಣ ಜಾನುವಾರು 21 ಹಾಗೂ ದೊಡ್ಡ ಜಾನುವಾರು 46 ಆಗಿದೆ. ಅಲ್ಲದೆ ಜಿಲ್ಲೆಯಲ್ಲಿ ಒಟ್ಟು 47 ಮನೆ ಹಾನಿಯಾಗಿದ್ದು, ಹಾನಿಗೆ ಒಳಗಾದವರಿಗೆ ಸೂಕ್ತ ಸಮಯದಲ್ಲಿ ಪರಿಹಾರ ನೀಡಲು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಜಿಲ್ಲೆಯಲ್ಲಿ ನಷ್ಟಕ್ಕೆ ಹಿಡಿದಾ ರೈತರ ಪಟ್ಟಿ ಸಿದ್ದ ಮಾಡಿ ಕೃಷಿ ಇಲಾಖೆಯ ಮೂಲಕ ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ಖಾಸಗಿ ಬೋರವೆಲ್ ಮಾಲೀಕರಿಗೆ ಯಾವ ಯಾವ ಯೋಜನೆಯಡಿ ಅನುದಾನವನ್ನು ಬಿಡುಗಡೆ ಮಾಡಬೇಕು. ಎಂಬುದನ್ನು ಸ್ಪಷ್ಟವಾಗಿ ಅಧಿಕಾರಿಗಳಿಗೆ ಜಿ.ಪಂ ಸಿಇಒ ಅವರು ನಿರ್ದೇಶನ ನೀಡಬೇಕು ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

## ಗ್ರಾಮೀಣ, ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿ

ಈ ಸಂದರ್ಭದಲ್ಲಿ ಸಂಸದರಾದ ಜಿ.ಕುಮಾರ್ ನಾಯಕ್, ಶಾಸಕರಾದ ಬಸನಗೌಡ ದದ್ದಲ್, ವಿಧಾನಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೊಹಾಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಶು ಗಿರಿ, ಜಿ.ಪಂ.ಉಪಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜೇರಿ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಶರಣಬಸವರಾಜ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿಗಳಾದ ವಿಜಯಶಂಕರ ಹಾಗೂ ತಹಶೀಲ್ದಾರ ಸುರೇಶ ವರ್ಮಾ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಪರ್ವಾ, ತಾಲೂಕ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಪವನ್ ಪಾಟೀಲ್ ಹಾಗೂ ಜಿ.ಪಂ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

## ಎಸ್ಐಆರ್ ಕುರಿತು ಆತಂಕ ಬಿಟ್ಟು ಮಾಹಿತಿ ನೀಡಿ-ಬೋಸರಾಜ

ಅರ್ಹರಿಗೆ ಗ್ಯಾರಂಟಿ ಯೋಜನೆಗಳು ತಲುಪಲು ಈ ಮತದಾರ ಪರಿಷ್ಕರಣೆ ಅಗತ್ಯವಾಗಿದೆ ಎಂದು ಮತದಾರರಿಗೆ ಬೋಸರಾಜು ಮನವರಿಕೆ ಮಾಡಿದರು.

ಪ್ರತಿಯೊಬ್ಬ ಅರ್ಹ ನಾಗರಿಕನ ಹೆಸರು ಮತದಾರರ ಪಟ್ಟಿಯಲ್ಲಿ ಸರಿಯಾಗಿ ದಾಖಲಿಸಬೇಕು. ಮತದಾರರ ಹೆಸರು ಸೇರ್ಪಡೆ, ವಿಳಾಸ ಬದಲಾವಣೆ, ತಿದ್ದುಪಡಿ, ವಯಸ್ಸು ಮತ್ತು ಗುರುತಿನ ವಿವರಗಳ ಪರಿಶೀಲನೆ ಸೇರಿದಂತೆ ಎಲ್ಲ ಮಾಹಿತಿಯೂ ಸರಿಯಾಗಿ ನೀಡಬೇಕು ಎಂದು ತಿಳಿಸಿದರು.

ಅಗತ್ಯ ದಾಖಲೆಗಳನ್ನು ಸಮಯಕ್ಕೆ ಸರಿಯಾಗಿ ಸಲ್ಲಿಸುವುದು, ಬೂತ್ ಮಟ್ಟದ ಅಧಿಕಾರಿಗಳೊಂದಿಗೆ ಸಹಕರಿಸುವುದು ಮತ್ತು ಯಾವುದೇ ತಪ್ಪು ಮಾಹಿತಿ ಕಂಡುಬಂದರೆ ತಕ್ಷಣ ಸರಿಪಡಿಸಿಕೊಳ್ಳುವುದು ಅತ್ಯಂತ ಮುಖ್ಯವಾಗಿದೆ ಈ ಪ್ರಕ್ತಿಯಲ್ಲಿ ಬಿಎಲ್ ಓ ಹಾಗೂ ಬಿಎಲ್ ಎ - 2 ಗಳ ಸಮನ್ವಯತೆ ಮುಖ್ಯವಾಗಿದೆ ಎಂದು ತಿಳಿಸಿದರು. ಮತದಾರರ ಪಟ್ಟಿಯಲ್ಲಿ ಅರ್ಹ ನಾಗರಿಕರ ಹೆಸರು ಕೈಬಿಡದಂತೆ ಮನೆಮನೆಗೆ ತೆರಳಿ ಜಾಗೃತಿ ಮೂಡಿಸುವ ಕೆಲಸವನ್ನು ಕಾರ್ಯಕರ್ತರು, ಬೂತ್ ಏಜೆಂಟ್‌ಗಳು ಹಾಗೂ ಸಂಬಂಧಿತ ಅಧಿಕಾರಿಗಳು ಸಮನ್ವಯದಿಂದ ಕೈಗೊಳ್ಳಬೇಕು ಎಂದು ಕರೆ ನೀಡಿದರು. ವಿಶೇಷವಾಗಿ ಯುವ ಮತದಾರರು, ಮಹಿಳೆಯರು, ವಲಸೆ ಬಂದವರು ಮತ್ತು ಹೊಸದಾಗಿ ಮತದಾನದ ಅರ್ಹತೆ ಪಡೆದಿರುವವರು ತಮ್ಮ ಹೆಸರು, ವಿಳಾಸ ಮತ್ತು ಇತರ ವಿವರಗಳನ್ನು ಪರಿಶೀಲಿಸಿ ಅಗತ್ಯವಿದ್ದರೆ ತಕ್ಷಣ ನೋಂದಾಯಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದವರು, ತಪ್ಪು ದಾಖಲೆ ಹೊಂದಿರುವವರು ಅಥವಾ ಸ್ಥಳಾಂತರಗೊಂಡವರು ನಿರ್ಲಕ್ಷ್ಯ ಮಾಡದೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಮತದಾರರ ಪಟ್ಟಿಯ ಶುದ್ಧೀಕರಣ ಕಾರ್ಯ ಯಶಸ್ವಿಯಾಗಲು ಸಾರ್ವಜನಿಕರು, ಪಕ್ಷದ ಕಾರ್ಯಕರ್ತರು ಮತ್ತು ಅಧಿಕಾರಿಗಳು ಒಟ್ಟಾಗಿ ಕೆಲಸ ಮಾಡಬೇಕು; ಯಾವುದೇ ಅರ್ಹ ಮತದಾರರನ್ನು ಕೈಬಿಡದಂತೆ ಎಲ್ಲರೂ ಜಾಗರೂಕರಾಗಿರಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮೊಹ್ಮದ್ ಶಾಲಂ, ಜಯಣ್ಣ, ಕೆ ಶಾಂತಪ್ಪ, ಜಯವಂತರಾವ್ ಪತಂಗೆ, ಯುಸೂಫ ಖಾನ್, ಜಿಂದಪ್ಪ, ದೇವರಾಜ್, ತಿಮ್ಮಪ್ಪ ಬಿಲ್ ಒ, ಬೂತ್ ಮಟ್ಟದ ಏಜೆಂಟ್‌ಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಸರ್ಕಾರದಿಂದ ಪರಿಹಾರ ಒದಗಿಸಲು ಪ್ರಯತ್ನ-ಕುಮಾರನಾಯಕ ಭರವಸೆ


ಸಂಸದ ಜಿ.ಕುಮಾರ ನಾಯಕ ತಿಳಿಸಿದರು. ಬರಗಾಲ ಸ್ಥಿತಿ-ಗತಿ ಚರ್ಚಿಸಲು ಸಭೆ:ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟಿದ್ದು ಬರಗಾಲ ಲಕ್ಷಣಗಳು ಕಂಡುಬಂದಿದೆ.ಈ ಕುರಿತು ಜಿಲ್ಲಾಧಿಕಾರಿಗಳು ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ಸಮಸ್ಯೆಗಳು ಮತ್ತು ಪರಿಹಾರ ಕುರಿತು ಚರ್ಚಿಸಲಾಗುವದು.ಜಲಾಷಯಗಳಲ್ಲಿ ನೀರಿನ ಪ್ರಮಾಣ ಕಡಿಮೆ ಇರುವದರಿಂದ ಮುಖ್ಯಮಂತ್ರಿಗಳು ಕೂಡ ರೈತರಿಗೆ ಮನವಿ ಮಾಡಿ,ನೀರಾವರಿ ಜಮೀನುಗಳಲ್ಲಿ ಬಿತ್ತನೆಗೆ ಮುಂದಾಗಬೇಡಿ ಎಂದು ತಿಳಿಸಿದ್ದಾರೆ. ಈಗಾಗಲೇ ರಾಜ್ಯ ಸರಕಾರ ಬರಗಾಲ ಪರಿಸ್ಥಿತಿಯನ್ನು ನಿಭಾಯಿಸಲು ಪೂರ್ವ ತಯಾರಿ ಕ್ರಮಗಳನ್ನು ಸಿದ್ಧತೆ ಮಾಡಿಕೊಂಡಿದ್ದು,ಯಾರೂ ಆತಂಕಕ್ಕೆ ಒಳಗಾಗಬಾರದು ಎಂದು ಸಂಸದ ಜಿ.ಕುಮಾರ ನಾಯಕ ತಿಳಿಸಿದರು. ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ರಾಮಣ್ಣ ಇರಬಗೇರಾ,ಆರ್ ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಜಶೇಖರ ನಾಯಕ,ಎಪಿಎಂಸಿ ಅಧ್ಯಕ್ಷ ಆದನಗೌಡ ಪಾಟೀಲ್ ಬುಂಕಲದೊಡ್ಡಿ ,ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಲಕ್ಷ್ಮಣ ಜ್ಯೋತಿ,ಕೆಡಿಪಿ ಸದಸ್ಯ ರಾಮಣ್ಣ ಕರಿಗುಡ್ಡ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಗೌಡ ಬಕ್ರಿ, ಗೌರಂಪೇಟ,ಮಹಿಳಾ ಘಟಕ ಅಧ್ಯಕ್ಷೆ ಅಮೃತಾ ಪಾಟೀಲ್,ಪುರಸಭೆ ಮಾಜಿ ಸದಸ್ಯ ವೆಂಕಟೇಶ ಮಕ್ತಲ್ ಹಾಗೂ ತಹಸೀಲ್ದಾರ ನಾಗಮ್ಮ ಎಂ.ಕಟ್ಟೀಮನಿ,ಸಿಪಿಐ ಮಂಜುನಾಥ,ಸಮಾಜ ಕಲ್ಯಾಣಧಿಕಾರಿ ಡಾ.ರಾಜಕುಮಾರ ಡೋಣಿ,ಪುರಸಭೆ ಮುಖ್ಯಧಿಕಾರಿ ಹಂಪಯ್ಯ ಕೆ.ಹಾಗೂ ಇತರರು ಇದ್ದರು.

## ಪೊಲೀಸ್ ಠಾಣೆಗೆ ಸರಕಾರಿ ಕಾಲೇಜು ವಿದ್ಯಾರ್ಥಿನಿಯರ ಭೇಟಿ

ಠಾಣೆಯ ಪೊಲೀಸ್ ಅಧಿಕಾರಿಗಳು ವಿದ್ಯಾರ್ಥಿನಿಯರನ್ನು ಆತ್ಮೀಯವಾಗಿ ಬರಮಾಡಿಕೊಂಡು,ಪೊಲೀಸ್ ಇಲಾಖೆಯ ಕಾರ್ಯವೈಖರಿಯನ್ನು ಪರಿಚಯಿಸಿದರು.ಸಮಾಜದಲ್ಲಿ ಮಾದಕ ವಸ್ತುಗಳ ಬಳಕೆಯಿಂದ ಯುವ ಪೀಳಿಗೆ ಹೇಗೆ ದಾರಿ ತಪ್ಪುತ್ತಿದೆ ಮತ್ತು ಅದು ಆರೋಗ್ಯದ ಮೇಲೆ ಬೀರುವ ಭೀಕರ ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿದರು. ಅಪರಾಧ ತಡೆಗಟ್ಟುವಲ್ಲಿ ಸಾರ್ವಜನಿಕರ ಹಾಗೂ ವಿದ್ಯಾರ್ಥಿಗಳ ಪಾತ್ರ ದೊಡ್ಡದಾಗಿದೆ ಎಂದು ಅಧಿಕಾರಿಗಳು ತಿಳಿಸಿದರು. ಇದೇ ಮೊದಲ ಬಾರಿಗೆ ಪೊಲೀಸ್ ಠಾಣೆಯ ಒಳಾಂಗಣವನ್ನು ವೀಕ್ಷಿಸಿದ ವಿದ್ಯಾರ್ಥಿನಿಯರು ಅತ್ಯಂತ ಕುತೂಹಲದಿಂದ ಪ್ರಶ್ನೆಗಳನ್ನು ಕೇಳಿ ಮಾಹಿತಿ ಪಡೆದರು. ದೂರು ದಾಖಲಿಸುವುದು ಹೇಗೆ,ಎಫ್ಐಆರ್ ಎಂದರೇನು,ಮತ್ತು ಮಾದಕ ದ್ರವ್ಯ ಜಾಲದ ವಿರುದ್ಧ ಪೊಲೀಸರು ಕೈಗೊಳ್ಳುವ ಕ್ರಮಗಳೇನು ಎಂಬುದನ್ನು ಅಧಿಕಾರಿಗಳಿಂದ ಮುಕ್ತವಾಗಿ ತಿಳಿದುಕೊಂಡರು. ಈ ವೇಳೆ ಶಾಲೆಯ ಶಿಕ್ಷಕ ವೃಂದ ಹಾಗೂ ಪೊಲೀಸ್ ಠಾಣೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು. ಇನ್ನೂ ವಿದ್ಯಾರ್ಥಿನಿಯರಲ್ಲಿ ಕಾನೂನಿನ ಅರಿವು ಮೂಡಿಸುವ ಈ ಭೇಟಿಯು ಯಶಸ್ವಿಯಾಗಿ ಜರುಗಿತು.

# ನೆಹರು ಪ್ರಧಾನಿ ಆಸೆಗಾಗಿ ಭಾರತ ವಿಭಜನೆ ಆಯಿತು: ಬಸವರಾಜ ಬೊಮ್ಮಾಯಿ..!

**ಹಾವೇರಿ,ಜು.3**-ನೆಹರು ಪ್ರಧಾನಿ ಆಸೆಗಾಗಿ ಭಾರತ ವಿಭಜನೆ ಆಯಿತು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಶುಕ್ರವಾರ ಹೇಳಿದರು




ಎಸ್ಐಆರ್ ಪ್ರಕ್ರಿಯೆ ಸಭೆಯಲ್ಲಿ ಮಾತನಾಡಿದ ಬಸವರಾಜ ಬೊಮ್ಮಾಯಿ, ಶ್ಯಾಮ್ ಪ್ರಸಾದ್ ಮುಖರ್ಜಿಯವರು ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತಮ್ಮನ್ನು ತಾವು ತೊಡಗಿಸಿಕೊಂಡವರಾಗಿದ್ದರು. ನೆಹರೂ ಅವರ ಮೊದಲನೇ ರಾಷ್ಟ್ರೀಯ ಸರ್ಕಾರದಲ್ಲಿ ಕ್ಯಾಬಿನೆಟ್ ಸಚಿವರಾಗಿದ್ದರು ಎಂದು ತಿಳಿಸಿದರು.

1952 ರ ಪೂರ್ವದಲ್ಲಿ ರಾಷ್ಟ್ರೀಯ ಸರ್ಕಾರ ರಚನೆಯಾದಾಗ ಚುನಾಯಿತ ಸರ್ಕಾರ ಇರಲಿಲ್ಲ, ದೇಶದ ವಿವಿಧ ಭಾಗದಲ್ಲಿ ಇರುವಂತಹ ಅತ್ಯಂತ ಪ್ರಭಾವಿ ಚಿಂತಕರು ಮತ್ತು ದೇಶದ ಬಗ್ಗೆ ಸಂಪೂರ್ಣವಾಗಿ ಎಲ್ಲಾ ರೀತಿಯ ವಿಚಾರಗಳನ್ನು ತಿಳಿದುಕೊಂಡು ಹೋಗಿರುವಂತಹ ಮೇಧಾವಿಗಳಿಗೆ ಅಲ್ಲಿ ಕ್ಯಾಬಿನೆಟ್ ದರ್ಜೆ ಕೊಟ್ಟಿತ್ತು. ಅದರಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಅವರು ಕೂಡ ಇದ್ದರು. ಸೋಶಿಯಲಿಸ್ಟ್ ಪಾರ್ಟಿಯ ಜನರು ಇದ್ದರು. ಕಮ್ಯುನಿಸ್ಟ್ ಪಾರ್ಟಿಯ ಡಾಂಗೆ ಅಂತಹ ಮೇಧಾವಿಗಳಿದ್ದ ಕ್ಯಾಬಿನೆಟ್‌ನಲ್ಲಿ ಬಂಗಾಳದ ಶ್ಯಾಮ್ ಪ್ರಸಾದ್ ಮುಖರ್ಜಿ ಅವರು ಇಡೀ ಭಾರತದ ಒಂದು ಕಲ್ಪನೆಯನ್ನು ಇಟ್ಟುಕೊಂಡು ಹೋರಾಟ ಮಾಡಿದ್ದರು ಎಂದು ಸ್ಮರಿಸಿದರು.

ಅಖಂಡ ಭಾರತ ಅಂತ ಅಂದರೆ ಈಗೇನು ಪಾಕ್ ಆಕ್ರಮಿತ ಕಾಶ್ಮೀರ ಅಂತ ಕರೆಯುತ್ತಾರೆ, ಅಲ್ಲಿಂದ ಹಿಡಿದು ಭೂತಾನ್ ಬರ್ಮಾವರೆಗೂ ದಕ್ಷಿಣದಲ್ಲಿ ಶ್ರೀಲಂಕಾವರೆಗೂ ಇತ್ತು. ಇವತ್ತಿಗೂ ಈ ಎಲ್ಲಾ ದೇಶದಲ್ಲಿ ನಮ್ಮ ಆದಿ ಸಂಸ್ಕೃತಿ ಮತ್ತು ದೇವರು ದೇವಸ್ಥಾನದ ಪೂಜೆ ಆಗುತ್ತಿದೆ ಎಂದು ಹೇಳಿದರು.

ಶ್ರೀರಾಮಚಂದ್ರನ ಪೂಜೆ ಶ್ರೀಲಂಕಾದಲ್ಲೂ ಆಗುತ್ತೆ, ನೇಪಾಳದಲ್ಲೂ ಆಗುತ್ತದೆ, ಭೂತಾನದಲ್ಲೂ ಆಗುತ್ತದೆ. ಬುದ್ಧನ ಒಂದು ಪ್ರಾರ್ಥನೆ ಅಫ್ಘಾನಿಸ್ತಾನದಲ್ಲೂ ಆಗುತ್ತದೆ. ಪಾಕ್ ಆಕ್ರಮಿತ ಕಾಶ್ಮೀರದಲ್ಲಂತೂ ಸಾವಿರಾರು ಹಿಂದೂ ದೇವಸ್ಥಾನಗಳಿವೆ. ಆದರೆ ದೇಶ ವಿಭಜನೆ ವೇಳೆ ಕಾಂಗ್ರೆಸ್ಸಿನ ನಾಯಕರು ವಿಶೇಷವಾಗಿ ಜವಾಹರಲಾಲ್ ನೆಹರು ವಿಭಜಿತ ಭಾರತದ ಪ್ರಧಾನಮಂತ್ರಿಯಾಗುವಂತಹ ಒಂದು ಮಹದಾಸೆಯಿಂದ, ರಾಜಿ ಪಂಚಾಯಿತಿ ಮಾಡಿ ದೇಶ ವಿಭಜನೆ ಆಯಿತು, ಸ್ವತಂತ್ರ ಬಂತು ಎಂದು ಹೇಳಿದರು.

1951 ರಲ್ಲಿ ಶ್ಯಾಮಪ್ರಸಾದ್ ಮುಖರ್ಜಿಯವರು ಜನಸಂಘದ ಸ್ಥಾಪಿಸಿ ದೇಶಕ್ಕಾಗಿ ತನ್ನ ಜೀವನವನ್ನೇ ತ್ಯಾಗ ಮಾಡಿರುವಂತಹ ಶ್ರೇಷ್ಠ ನಾಯಕ. ಅವರ ವಿಚಾರ ಮತ್ತು ಅವರ ಆದರ್ಶಗಳು ಇಂದು ಕೂಡ ನಮಗೆ ದಾರಿದೀಪವಾಗಿದ್ದಾವೆ. ಆ ದಾರಿದೀಪ ಮುಂದಿನ ಪೀಳಿಗೆಗೂ ಕೂಡ ಇರಬೇಕು ಅನ್ನುವ ಕಾರಣಕ್ಕಾಗಿ ಈ ಜನ್ಮದಿನಾಚರಣೆಯನ್ನು ನಾವು ಆಚರಣೆ ಮಾಡುತ್ತಿದ್ದೇವೆ. ಅವರ ವಿಚಾರಧಾರೆಗಳನ್ನು ಓದಿ ತಿಳ್ಕೊಂಡು, ಅನುಷ್ಠಾನ ನಿಮ್ಮ ಬದುಕಿನಲ್ಲಿ ಮಾಡಿದರೆ ಅದು ಸಾರ್ಥಕತೆ ಆಗುತ್ತದೆ ಎಂದು ಅವರು ತಿಳಿಸಿದರು.

# ಹೈಯ್ಯಾಳ (ಕೆ) ಕು-ಗ್ರಾಮದಲ್ಲಿ ಸಾಂಕ್ರಾಮಿಕ ರೋಗದ ಭೀತಿಯಲ್ಲಿ ಗ್ರಾಮದ ನಿವಾಸಿಗಳು-ಮುದ್ನಾಳ್ ಆರೋಪ..!

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜು.4**-ವಡಗೇರಾ ತಾಲೂಕಿನ ಟಿ.ವಡಗೇರಾ ಗ್ರಾಮ ಪಂಚಾಯಿತಿಗೆ ವ್ಯಾಪ್ತಿಗೆ ಬರುವ ಹೈಯ್ಯಾಳ (ಕೆ) ಗ್ರಾಮದಲ್ಲಿ ಸ್ವಾತಂತ್ರ್ಯ ಸಿಕ್ಕು78 ವರ್ಷ ಗತಿಸಿದರು ಇಲ್ಲಿಯವರೆಗೂ ಇನ್ನು ಅಭಿವೃದ್ಧಿ ಕಾಣದೇ ಗಬ್ಬೆದ್ದು ನಾರುತ್ತಿದೆ. ಕಲುಷಿತ ನೀರಿನಲ್ಲಿ ವಿಷ ಜಂತುಗಳಿಂದ ಜನ ಜಾನುವಾರು ಶಾಲಾ ಮಕ್ಕಳು ತಿರುಗಾಡಲು ಭಯದ ವಾತಾವರಣ ನಿರ್ಮಾಣವಾಗಿದೆ ಎಂದು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಅವರು ಆರೋಪಿಸಿದ್ದಾರೆ.





ಶುಕ್ರವಾರ ಬೆಳಂಬೆಳಗ್ಗೆ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಅವರು ಗ್ರಾಮಕ್ಕೆ ದಿಡೀರನೇ ಬೇಟಿ ನೀಡಿ ಗ್ರಾಮದ ಉದ್ದಕ್ಕೂ ಕಾಲನಡಿಗಿಯಲ್ಲಿ ತಮಟೆ ಬಾರಿಸುವ ಮುಖಾಂತರ ಪರಿಶೀಲಸಿದ ನಂತರ ಮಾತನಾಡಿದ ಅವರು ಗ್ರಾಮದೊಳಗಡೆ ಸೂಕ್ತವಾದ ಚರಂಡಿ ಸಿಸಿ ರಸ್ತೆ, ಶುದ್ಧ ಕುಡಿಯುವ ನೀರು, ತೆಗ್ಗುಗುಂಡಿ ಗಳಲ್ಲಿ ಚರಂಡಿ ನೀರು ನಿಂತು ಗಬ್ಬೆದ್ದು ನಾರುತ್ತಿದೆ ಇದರಿಂದಾಗಿ ಗ್ರಾಮಸ್ಥರು ಮೂಗು ಮುಚಿಕೊಂಡು ತಿರುಗಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಕುಂಭ ಕರ್ಣ ನಿದ್ರೆಗೆ ಜಾರಿದ ದಪ್ಪ ಚರ್ಮದ ಅಧಿಕಾರಿಗಳ ವಿರುದ್ಧ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ ಕೆ. ಮುದ್ನಾಳ್ ಅವರು ಬೆಳಂ ಬೆಳಗ್ಗೆ ವಿನೂತನವಾಗಿ ಜಿಟ ಜಿಟಿ ಸುರಿಯುತ್ತಿರುವ ಮಳೆಯಲ್ಲಿ ಕೈಯಲ್ಲಿ ಕಾಲಿಕೊಡ ಬಾರಿಗೆ ಹಿಡಿದು ಗ್ರಾಮಸ್ಥರು ಮಹಿಳೆಯರು ಸೇರಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ತಮಟೆ ಬಾರಿಸುವ ಮುಖಾಂತರ ಬೃಹತ್ ಪ್ರತಿಭಟನೆ ನಡೆಸಿದರು.

ಇದರಿಂದ ಗ್ರಾಮದಲ್ಲಿ ಡೆಂಗು ಮಲೇರಿಯಾ, ಸೇರಿದಂತೆ ಅನೇಕ ಸಾಂಕ್ರಾಮಿಕ ರೋಗ ಹರಡುತ್ತಿದ್ದು ಸೊಳ್ಳೆಗಳ ಹಾವಳಿಗೆ ಜನ ಜಾನುವಾರುಗಳು ತತ್ತರಿಸಿವೆ ಎಂದು ಕಿಡಿ ಕಾರಿದರು. ಜೊತೆಗೆ ಗ್ರಾಮದಲ್ಲಿ 1) ಗಬ್ಬೆದು ನಾರುತಿದ್ದ ತೆರೆದ ಭಾವಿ, 2) ಹಾಳಾಗಿ ನಿಂತ ಶುದ್ಧ ಕುಡಿಯುವ ನೀರಿನ ಘಟಕ, 3) ಅಪಾಯಕ್ಕೆ ಆಹ್ವಾನಿಸುತ್ತಿರುವ ವಿದ್ಯುತ್ ಟ್ರಾನ್ಸ್‌ಫರ್ಮರ್ 4) ಉದ್ಘಾಟನೆಕ್ಕಾಗಿ ಕೈ ಬಿಸಿ ಕರೆಯುತ್ತಿರುವ ಕುಡಿಯುವ ನೀರಿನ ಟ್ಯಾಂಕ್, 5) ಸರಿಯಾಗಿ ಸಿಸಿ ರಸ್ತೆ ಚರಂಡಿ ಇಲ್ಲದ ಕಾರಣ ತಗ್ಗುಗುಂಗಳಲ್ಲಿ ನಿಂತ ಕಲುಷಿತ ನೀರು, 6) ಮಹಿಳೆಯರ ಶೌಚಾಲಯ ಕೊರತೆ 7) ಸರಿಯಾಗಿ ಕುಡಿಯುವ ನೀರಿನ ಪೈಪಲೈನ್ ಇಲ್ಲಾ 8) ಹೈಯ್ಯಾಳ ಕೆ. ದಿಂದ ಮುನಮುಟಗಿ ಹೋಗುವ ರಸ್ತೆ ಸಂಪೂರ್ಣ ಜಾಲಿ ಕಂಟಿಗಳು ಬೆಳೆದು ರೈತರು ಜಮೀನಿಗೆ ತೆರಳಲಾಗದ ಪರಸ್ಥಿತಿ ನಿರ್ಮಾಣವಾಗಿದೆ 9) ಗ್ರಾಮದಲ್ಲಿ ಸಂಪೂರ್ಣ ಸ್ವಚ್ಛತೆ ಮರೀಚಿಕೆಯಾಗಿದೆ. ದ್ವಿಚಕ್ರ ವಾಹನಗಳು ಸಂಚರಿಸುವಾಗ ಹೊಲಸಿನಲ್ಲಿ ಬಿದ್ದು ಸಂಕಷ್ಟ ಎದುರಿಸುವುದು ನಿತ್ಯದ ಸಂಗತಿಯಾಗಿದೆ. ಶುದ್ಧ ಕುಡಿವ ನೀರು ತರಬೇಕೆಂದರೂ ಹೊಲಸಿನಲ್ಲಿಯೇ ಸಾಗಬೇಕಿದೆ. ಲಕ್ಷಲಕ್ಷ ರೂ. ಗಳು ಗ್ರಾಮಗಳ ಅಭಿವೃದ್ಧಿಗೆ ಬಂದ ಹಣ ಯಾರ ಮನೆಯ ತಿಜೋರಿ ಸೇರಿದೆ ಎಂಬುದು ಅರ್ಥವಾಗದ ಪರಿಸ್ಥಿತಿ ಗ್ರಾಮದಲ್ಲಿ ಇದೆ ಎಂದು ಅವರು ಇದೇ ಸಂದರ್ಭದಲ್ಲಿ ಆಕ್ರೋಶ ವ್ಯಕ್ತಪಡಿಸಿದರು. ಇಪ್ಪತ್ತು ನಾಲ್ಕು ಗಂಟೆಗಳಲ್ಲಿ ಸಂಭಂದಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸದೆ ಇದ್ದರೆ ಯಾದಗಿರಿ - ಸುರಪುರ ಹೋಗುವ ಮುಖ್ಯ ರಸ್ತೆ ಭಾರಕೋಲ ಹಿಡಿದು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಜಿಲ್ಲಾಡಳಿತಕ್ಕೆ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಭೀಮಾಶಂಕರ, ಸೂಗಯ್ಯ, ಮಾದೇಶ, ರತ್ನಪ್ಪ. ಗಿರಿಶ, ಸಾಉಣ್ಣ, ಸಿದ್ದಪ್ಪ, ತಿಪ್ಪಣ್ಣ, ಅಯ್ಯಪ್ಪ, ಲಾಳೇಸಾಬ, ರಾಜೇಸಾಬ, ಕಾಶಪ್ಪ. ಬಸಪ್ಪ. ಶಾಂತಪ್ಪ. ಗೌಡಪ್ಪ, ಹಣಮಂತ, ದೊಡ್ಡಪ್ಪ, ದೇವಪ್ಪ. ನಿಂಗಪ್ಪ, ಬಸವರಾಜ, ಬಸ್ಸು, ಯಂಕಪ್ಪ, ನಿಂಗಪ್ಪ, ಮಾನಪ್ಪ, ಬಡ್ಡೇಪ್ಪ, ಭೀಮರಾಯ ದೇವಕೆಮ್ಮ, ತಿಪ್ಪಮ್ಮ, ನಿಂಗಮ್ಮ, ಸೋಪ್ಪಮ್ಮ, ಮಲ್ಲಮ್ಮ, ಮರೆಮ್ಮ, ದೇವಿಂದ್ರಮ್ಮ, ಭಾನು, ಅಲಿಯಾ, ನಾರಮ್ಮ ಸೇರಿದಂತೆ ಅನೇಕ ಗ್ರಾಮದ ಮುಖಂಡರು ಯುವಕರು ಈ ವಿನೂತನ ಪ್ರತಿಭಟನೆಯಲ್ಲಿ ಭಾಗವಹಿಸಿದರು.

# ಮನೆ ಮನೆಗೆ ತೆರಳಿ ಫಾರಂ ಕೊಡ್ಬೇಕು: ರಾಜ್ಯ ಮುಖ್ಯ ಚುನಾವಣಾಧಿಕಾರಿ ಖಡಕ್ ಸೂಚನೆ

ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಖಡಕ್ ಸೂಚನೆ ನೀಡಿದ್ದಾರೆ. ಭಾರತೀಯ ಚುನಾವಣಾ ಆಯೋಗದ ನಿರ್ದೇಶನ ಹಾಗೂ ವೇಳಾಪಟ್ಟಿಯ ಪ್ರಕಾರ ಕರ್ನಾಟಕದಲ್ಲಿ ಜೂನ್ 30 ರಿಂದಲೇ ಮತದಾರರಿಗೆ ಎನ್ಯೂಮರೇಶನ್ ಫಾರಂಗಳನ್ನು ವಿತರಿಸುವ ಪ್ರಕ್ರಿಯೆ ಆರಂಭವಾಗಿದೆ. ಆದರೆ, ಬಿಎಲ್ ಒಗಳು ಮನೆ ಮನೆಗೆ ಭೇಟಿ ನೀಡಿ ಫಾರಂ ಹಂಚುವ ಬದಲು, ಕಚೇರಿಗಳಲ್ಲೇ ಕುಳಿತು ವಿತರಿಸುತ್ತಿದ್ದಾರೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ಪತ್ರ ಬರೆದಿರುವ ಸಿಇಒ ವಿ. ಅನ್ಬುಕುಮಾರ್, ಎಲ್ಲಾ ಬಿಎಲ್‌ಒಗಳು ಕಡ್ಡಾಯವಾಗಿ ಪ್ರತಿಯೊಬ್ಬ ಮತದಾರನ ಮನೆ ಬಾಗಿಲಿಗೆ ಭೇಟಿ ನೀಡಿ ಫಾರಂ ವಿತರಿಸಬೇಕು. ವಿಶೇಷ ತೀವ್ರ ಪರಿಷ್ಕರಣೆಯ ಎಲ್ಲಾ ಹಂತಗಳಲ್ಲೂ ಇಸಿಐ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಅಧಿಕಾರಿಗಳು ಅಗತ್ಯ ನಿರ್ದೇಶನ ನೀಡಬೇಕು ಎಂದು ಆದೇಶಿಸಿದ್ದಾರೆ.

## ಕಾಂಗ್ರೆಸ್ ಪಕ್ಷದಲ್ಲಿ ರೇಟ್ ಫಿಕ್ಸ್, ಸಂಪುಟ ವಿಸ್ತರಣೆಗೆ ಡೇಟ್ ಫಿಕ್ಸ್ ಆಗುತ್ತಿಲ್ಲ: ಬಿ.ವೈ.ವಿಜಯೇಂದ್ರ

ಎಂದು ಸ್ವತಃ ಮುಖ್ಯಮಂತ್ರಿ ಹೇಳಿದ್ದು ಬಹಳ ಆಶ್ಚರ್ಯ ಮಾತ್ರವಲ್ಲದೇ ಅತ್ಯಂತ ನೋವನ್ನು ತಂದಿದೆ. ನಾವೇನೇ ಹೇಳಿಕೆ ನೀಡಿದರೂ ಪ್ರಬುದ್ಧತೆಯಿಂದ ಮಾತನಾಡಬೇಕು ಎಂದು ವಿನಂತಿಸಿದರು. ಇಡೀ ದೇಶದಲ್ಲಿ ಬರಗಾಲದ ಛಾಯೆ ಮೂಡಿದೆ. ಪ್ರಕೃತಿ ಮುನಿಸಿಕೊಂಡ ಸಂದರ್ಭದಲ್ಲಿ ರಾಜ್ಯದ ರೈತರಿಗೆ ಅಭಯ, ಭರವಸೆಯನ್ನು ಸರಕಾರ ನೀಡಬೇಕಿತ್ತು. ಮುಂದಿನ 15-20 ದಿನ ಮಳೆ ಬೀಳುವ ಆಶಾಭಾವ ಇದೆ. ಮುಖ್ಯಮಂತ್ರಿ ಹೇಳಿದರೆಂದು ಬಿತ್ತನೆಯೇ ಮಾಡದೇ ಇದ್ದರೆ ಯಾರು ಹೊಣೆಗಾರರು ಎಂದು ಕೇಳಿದರು.

ಶೇ. 50- 60 ಮಳೆ ಕಡಿಮೆ ಇರುವಾಗ ರಾಜ್ಯ ಸರಕಾರದ ಆದ್ಯತೆ ಏನು? ಇವರೇನಾದರೂ ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಿದ್ದಾರಾ? ರೈತರಿಗೆ ಸ್ಪಂದಿಸುವ ನಿಟ್ಟಿನಲ್ಲಿ ಜಾನುವಾರುಗಳಿಗೆ ಸಂಬಂಧಿಸಿ ಅನುದಾನ ಬಿಡುಗಡೆ ಮಾಡಿದ್ದಾರಾ? ಬರಗಾಲದ ಮುನ್ಸೂಚನೆ ವಿಚಾರ ರಾತ್ರೋರಾತ್ರಿ ಜ್ಞಾನೋದಯ ಆಗಿದೆಯೇ? ಯಾಕೆ ಈ ರೀತಿ ಕಪಟ ನಾಟಕ ಆಡುತ್ತಿದ್ದೀರಿ? ಮುಖ್ಯಮಂತ್ರಿ ರೈತ ಪರವಾಗಿಲ್ಲದೇ ರಿಯಲ್ ಎಸ್ಟೇಟ್ ಪರ ಆದರೆ ರಾಜ್ಯದ ಹಣೆಬರಹ ಇದೇ ಆಗುತ್ತದೆ ಎಂದು ಆಕ್ಷೇಪಿಸಿದರು. ಹೀಗಿರುವಾಗ ನಮ್ಮ ಜಲಾಶಯದಿಂದ ತಮಿಳುನಾಡಿಗೆ ನೀರು ಬಿಡುವ ದುಸ್ಸಾಹಸಕ್ಕೆ ಯಾಕೆ ಕೈ ಹಾಕಿದ್ದೀರಿ ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿ ಇದರ ಬಗ್ಗೆ ಗಂಭೀರವಾಗಿ ಚಿಂತಿಸಬೇಕು. ರೈತರಿಗೆ ಕೊಡಬೇಕಾದ ಯೋಜನೆ, ಆಡಳಿತ ಸನ್ನದ್ಧತೆ ಕಡೆಗೆ ಗಮನಿಸದೇ ಮುಖ್ಯಮಂತ್ರಿ ಕೈಚೆಲ್ಲಿ ಕೂತರೆ ಹೇಗೆ? ಎಸ್ಐಆರ್ ಇರುವ ಕಾರಣ ಆಗಸ್ಟ್ ಮಧ್ಯದಲ್ಲಿ ಮುಂಗಾರು ಅಧಿವೇಶನ ಮಾಡುವುದಾಗಿ ಹೇಳಿದ್ದಾರೆ. ಶಾಸಕರು ಮನೆ ಮನೆಗೆ ತೆರಳಿ ಎಸ್ಐಆರ್ ಮಾಡುತ್ತಾರಾ? ಇದೇ ಕಾರಣಕ್ಕೆ ಅಧಿವೇಶನ ಮುಂದೂಡುತ್ತಿದ್ದಾರೆ. ಸಿದ್ದರಾಮಯ್ಯ ಅವರದ್ದು ಪೂರ್ಣ ಸಂಪುಟ ಇದ್ದರೂ ನೆರೆ ಬಂದಾಗ ರೈತರ ಸಂಕಷ್ಟಕ್ಕೆ ಸ್ಪಂದಿಸಿರಲಿಲ್ಲ ಎಂದು ದೂರಿದರು.

ಹಾನಗಲ್ ತಾಲೂಕಿನ ನರೇಗಲ್‌ನಲ್ಲಿ ಹಾಲುಮತ ಸಮಾಜದ ಒಂದೇ ಕುಟುಂಬದ ಆರು ಜನರ ಮೇಲೆ ಮಾರಣಾಂತಿಕ ಹಲ್ಲೆ ನಡೆದಿದೆ. ಮತ್ತೊಂದೆಡೆ ರಟ್ಟಿಹಳ್ಳಿಯಲ್ಲಿ ಮರಾಠ ಸಮಾಜದ ಬಡ ಕುಟುಂಬದ ಶಿವಾಜಿ ರಾವ್ ಅವರನ್ನು ಹಾಡಹಗಲೇ ಒದ್ದು ಪ್ರಾಣ ತೆಗೆಯುವ ಕೆಲಸ ಆಗಿದೆ. ಚಿಕ್ಕಬಳ್ಳಾಪುರದಲ್ಲಿ ಲವ್ ಜಿಹಾದ್‌ಗೆ ಒಳಗಾಗಿ ಫಿಸಿಯೋಥೆರಪಿಸ್ಟ್ ಕೊಲೆಯಾಗಿದೆ. ಮುಖ್ಯಮಂತ್ರಿ ಡಿ.ಕೆ. ಸಾಫ್ಟ್ ಹಿಂದುತ್ವವಾದ, ಗೃಹಸಚಿವ ಪಿ.ಕೆ. ಮತ್ತು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಅವರ ಹಿಂದೂ ವಿರೋಧಿ ನೀತಿ- ಇವರ ಹೇಳಿಕೆಗಳು ಮತೀಯ ಶಕ್ತಿಗಳಿಗೆ ಧೈರ್ಯ ನೀಡುತ್ತಿದೆ ಎಂದು ಟೀಕಿಸಿದರು. ಕಾಂಗ್ರೆಸ್ ಸರಕಾರದ ಅಲ್ಪಸಂಖ್ಯಾತರ ಓಲೈಕೆಯೇ ಇದಕ್ಕೆ ಕಾರಣ ಎಂದು ಆಕ್ಷೇಪಿಸಿದರು.

ಬಿಎಲ್‌ಒಗಳು ಕಾಂಗ್ರೆಸ್ ಪರ ಪ್ರಚಾರಕ್ಕೆ ಬಳಕೆ: ಮಸೀದಿಯಲ್ಲಿ ಕೂರಿಸಿ ಎಸ್ಐಆರ್ ಪ್ರಕ್ರಿಯೆ ವಿಚಾರವಾಗಿ ಪ್ರತಿಕ್ರಿಯಿಸಿ, ಎಸ್ಐಆರ್ ಅಡಿ ಬಿಎಲ್‌ಒಗಳ ದುರುಪಯೋಗ ಆಗುತ್ತಿದೆ. ಅಧಿಕಾರಿಗಳನ್ನು ಮಸೀದಿಯಲ್ಲಿ ಕೂರಿಸಿ ಎಸ್ಐಆರ್ ಪ್ರಕ್ರಿಯೆ ಪೂರ್ಣಗೊಳಿಸುತ್ತಿದೆ. ರಾಜ್ಯ ಸರ್ಕಾರದಿಂದ ಹಿಂದೂಗಳ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ. ಸಾಗರದಲ್ಲಿ ಬಿಎಲ್‌ಒಗಳನ್ನು ಕಾಂಗ್ರೆಸ್ ಪರ ಪ್ರಚಾರಕ್ಕೆ ಬಳಸಿಕೊಳ್ಳುತ್ತಿದ್ದಾರೆ. ಮುಖ್ಯಮಂತ್ರಿ ಇದನ್ನು ಸರಿಪಡಿಸಬೇಕೆಂದು ಆಗ್ರಹಿಸಿದರು.

ಎಸ್ಐಆರ್ ವಿಚಾರದಲ್ಲಿ ಚಾಮರಾಜಪೇಟೆ ಮೊದಲಾದ ಕಡೆ ಆಗುತ್ತಿರುವ ಗೊಂದಲದ ಸಂಬಂಧ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇವೆ. ಇದನ್ನು ಚುನಾವಣಾ ಅಧಿಕಾರಿಗಳು ಸರಿಪಡಿಸಲಿ. ಕ್ಯಾಬಿನೆಟ್ ವಿಸ್ತರಿಸಿದರೆ ಈ ಸರ್ಕಾರದ ಬುಡ ಅಲ್ಲಾಡುವ ವಾಸ್ತವಿಕ ಸತ್ಯ ಸಿಎಂಗೆ ಗೊತ್ತಿದೆ. ಹಾಗಾಗಿ ಎಸ್ಐಆರ್ ನೆಪ ಒಡ್ಡಿದ್ದಾರೆ. ರಾಹುಲ್ ಗಾಂಧಿಯವರು 12 ತಿಂಗಳಲ್ಲಿ 8 ತಿಂಗಳು ವಿದೇಶದಲ್ಲೇ ಇರುತ್ತಾರೆ. ಸ್ವದೇಶದಲ್ಲಿ ಯಾವಾಗ ಇರುತ್ತಾರೆ ಎಂದು ಪ್ರಶ್ನಿಸಿದರು. ಒಂದು ಮ್ಯಾನೇಜ್‌ಮೆಂಟ್ ಕೋಟಾ, ಇನ್ನೊಂದು ಪೇಮೆಂಟ್ ಕೋಟಾ ಇರುವುದಾಗಿ ಹಿಂದೆಯೂ ಹೇಳಿದ್ದೆ ಎಂದು ಆರೋಪಿಸಿದರು.

## ಸಚಿವ ಸ್ಥಾನ ನೀಡಲು ಲಾರಿ ಓನರ್ಸ್ ವೇಲ್ಫೇರ್ ಅಸೋಸಿಯಷನ್ ಒತ್ತಾಯ

ಎಸ್.ಬೋಸರಾಜ ಇವರಿಗೆ ಸಚಿವ ಸ್ಥಾನನೀಡಬೇಕೆಂದು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳಿಗೆ ಪತ್ರ ಬರೆದು ಒತ್ತಾಯಿಸಿರುವದಾಗಿ ಹೇಳಿದರು. ಈ ಸಂದರ್ಬದಲ್ಲಿ ಸಂಘದ ಅಧ್ಯಕ್ಷ ಸೈಯದ್ ಹಸನ್,ಅಜಂಪಾಷಾ, ತೌಫಿಕ್ ಅಹ್ಮದ್, ಕುತುಬುದ್ದೀನ್, ಅಯ್ಯಪ್ಪ ಸೇರಿ ಅನೇಕರಿದ್ದರು.

## ಭಾರತೀಯ ಕ್ರೈಸ್ತ ದಿನ: ರಕ್ತದಾನ ಶಿಬಿರ

ಉತ್ಸಾಹದಿಂದ ಭಾಗವಹಿಸಿ ರಕ್ತದಾನ ಮಾಡಿದರು. ರಿಮ್ಸ್ ವೈದ್ಯಕೀಯ ಸಿಬ್ಬಂದಿ ಶಿಬಿರದ ನಿರ್ವಹಣೆಯಲ್ಲಿ ಸಹಕರಿಸಿ ರಕ್ತ ಸಂಗ್ರಹ ಪ್ರಕ್ರಿಯೆಯನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವೀಂದ್ರ ಜಲ್ದಾರ್, ಸಭಾ ಪಾಲಕ ಎನ್. ಜೆರ್ನಸ್ ಜೇಮ್ಸ್, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ವೈ. ಗೋಪಾಲ್ ಶೆಟ್ಟಿ, ರಿಮ್ಸ್ ವೈದ್ಯಾಧಿಕಾರಿ ಡಾ. ಹಮ್ಮದ್ ಹುಸ್ಸೇನ್, ಅಖಿಲ ಭಾರತ ಕ್ರೈಸ್ತ ಮಹಾಸಭಾ ಜಿಲ್ಲಾ ಅಧ್ಯಕ್ಷ ರಾಮಕೃಷ್ಣ ಪ್ರಸಾದ್, ಉದ್ಯಮಿಗಳಾದ ಮೂರ್ತಿ, ಕೃಷ್ಣ, ಮೆತುಷೆಲ್, ನಿವೃತ್ತ ಕೆಪಿಸಿ ಅಧಿಕಾರಿಗಳಾದ ಮುರಗೇಶ, ರಮೇಶ್, ಶ್ರಾವಣ, ಮಾರುತಿ ಸೇರಿದಂತೆ ಬ್ಲೆಸ್ಡ್ ಪುಲ್ ಗಾಸ್ಪೆಲ್ ಚರ್ಚ್ನ ವಿಶ್ವಾಸಿಗಳು ಉಪಸ್ಥಿತರಿದ್ದರು.

## ಮಹತ್ವದ ಭರವಸೆ: ಸಂಸದ ಯದುವೀರ್ ಮನವಿಗೆ ಸ್ಪಂದನೆ

ರೈತರು, ತೋಟಗಾರರು ಮತ್ತು ಸ್ಥಳೀಯ ನಿವಾಸಿಗಳನ್ನು ಕಾಡುತ್ತಿರುವ ಮಾನವಆನೆ ಸಂಘರ್ಷ ಸಮಸ್ಯೆ ನಿವಾರಣೆಗೆ ಕೇಂದ್ರ ಸರ್ಕಾರ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದ್ದಾರೆ. ಕೇಂದ್ರ ಸಚಿವಾಲಯವು ವನ್ಯಜೀವಿ ವಾಸಸ್ಥಳಗಳ ಅಭಿವೃದ್ಧಿ ಹಾಗೂ ಪ್ರಾಜೆಕ್ಟ್ ಟೈಗರ್ ಎಲಿಫೆಂಟ್ ಸೇರಿದಂತೆ ಕೇಂದ್ರ ಪ್ರಾಯೋಜಿತ ಯೋಜನೆಗಳಡಿ ರಾಜ್ಯ ಸರ್ಕಾರಗಳಿಗೆ ಆರ್ಥಿಕ ನೆರವು ನೀಡುತ್ತಿರುವುದಾಗಿ ತಿಳಿಸಿದೆ. ಇದಲ್ಲದೇ ದಕ್ಷಿಣ ಭಾರತದ ಮಾನವಆನೆ ಸಂಘರ್ಷವನ್ನು ಎದುರಿಸಲು ಪ್ರಾದೇಶಿಕ ಕಾರ್ಯಯೋಜನೆ ಸಿದ್ಧಪಡಿಸಲಾಗುತ್ತಿದ್ದು, ಕೊಡಗು ಪ್ರಮುಖ ಸಂಘರ್ಷ ಪ್ರದೇಶಗಳಲ್ಲಿ ಒಂದಾಗಿ ಗುರುತಿಸಲಾಗಿದೆ. ಈ ಕಾರ್ಯಯೋಜನೆ ಕೆಳಗಿನ ವಿಷಯಗಳ ಮೇಲೆ ಕೇಂದ್ರೀಕರಿಸಲಿದೆ:

ಕರ್ನಾಟಕ ರಾಜ್ಯಕ್ಕಾಗಿ ರೂಪಿಸಲಾದ ಈ ಐದು ವರ್ಷದ ಕಾರ್ಯಯೋಜನೆಗೆ ಸುಮಾರು ₹350 ಕೋಟಿ ವೆಚ್ಚ ನಿರೀಕ್ಷಿಸಲಾಗಿದ್ದು, ಆನೆಗಳ ಸುರಕ್ಷಿತ ಸಂಚಾರಕ್ಕೆ ಅನುಕೂಲವಾಗುವಂತೆ, ಮಾನವ ವಾಸಸ್ಥಳ ಮತ್ತು ಕೃಷಿ ಪ್ರದೇಶಗಳಿಗೆ ಆನೆಗಳ ನುಗ್ಗುವಿಕೆ ಕಡಿಮೆ ಮಾಡುವಂತೆ ಹಾಗೂ ಜೀವಹಾನಿ ಮತ್ತು ಆಸ್ತಿ ನಷ್ಟ ತಡೆಯುವಂತೆ ಯೋಜಿಸಲಾಗಿದೆ.

ಇದಲ್ಲದೇ, ಭಾರತೀಯ ವನ್ಯಜೀವಿ ಸಂಸ್ಥೆ ದಕ್ಷಿಣ ಭಾರತದ ಮಾನವಆನೆ ಸಹಬಾಳ್ವೆಗೆ ಸಂಬಂಧಿಸಿದಂತೆ ಉಪಗ್ರಹ ಟೆಲಿಮೆಟ್ರಿ ಮತ್ತು ಸಮೂಹ ಸಂವಹನ ಆಧಾರಿತ ಮುನ್ನೆಚ್ಚರಿಕಾ ವ್ಯವಸ್ಥೆ ಕುರಿತ ಅಧ್ಯಯನ ಕೈಗೊಳ್ಳಲು ಮುಂದಾಗಿದೆ. ಇದರ ಶಿಫಾರಸುಗಳ ಆಧಾರದ ಮೇಲೆ ಕೊಡಗು ಪ್ರದೇಶದಲ್ಲಿ ವಿಶೇಷ ಮುನ್ನೆಚ್ಚರಿಕಾ ವ್ಯವಸ್ಥೆ ಜಾರಿಗೊಳ್ಳುವ ಸಾಧ್ಯತೆ ಇದೆ.

ಈ ಕುರಿತು ಸಂಸದ ಯದುವೀರ್ ಒಡೆಯರ್ ಕೇಂದ್ರ ಸರ್ಕಾರದ ಸ್ಪಂದನೆಯನ್ನು ಸ್ವಾಗತಿಸಿ, ಮಾನವ ಜೀವ ಮತ್ತು ವನ್ಯಜೀವಿಗಳ ರಕ್ಷಣೆ ಎರಡನ್ನೂ ಸಮತೋಲನದಲ್ಲಿ ಉಳಿಸುವ ದೀರ್ಘಕಾಲಿಕ ಪರಿಹಾರಕ್ಕಾಗಿ ಕೇಂದ್ರ, ರಾಜ್ಯ ಸರ್ಕಾರ, ಅರಣ್ಯ ಇಲಾಖೆ ಹಾಗೂ ಸ್ಥಳೀಯ ಸಮುದಾಯಗಳ ಸಮನ್ವಯ ಅಗತ್ಯವೆಂದು ತಿಳಿಸಿದ್ದಾರೆ. ಕೊಡಗಿನ ರೈತರು ಮತ್ತು ನಿವಾಸಿಗಳ ಸಮಸ್ಯೆಗಳಿಗೆ ಆದ್ಯತೆ ನೀಡಿ ಪರಿಹಾರ ಕಲ್ಪಿಸಲು ತಾವು ನಿರಂತರವಾಗಿ ಶ್ರಮಿಸುತ್ತಿರುವುದಾಗಿ ಪುನರುಚ್ಚರಿಸಿದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L